ಸಂಪುಟ : 9 ಸಂಚಿಕೆ 115 ಪುಟ : 4 ಬೆಲೆ: 3.00 ಶನಿವಾರ ಜೂನ್ 8 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 115 Pages : 4 Price : 3.00 Saturday June 8 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಜೂನ್ 8ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರವಾರ್ಡ್ ನಂ. 22, 21 ವಿಜಯನಗರ ಶಾಲೆ, ವಾಲ್ಮೀಕಿ ಭವನ, ಶಿಗ್ಗಾವಿ ಲೇಔಟ್, ಕುರುಗಲ್ ಲೇಔಟ್, ಕಮತರ ಪ್ಲಾಟ್, ಟವರ್ ಕಂಬ ಉಳಿದ ಕೆಲವು ಭಾಗಗಳು. ವಾರ್ಡ್ ನಂ.11 ಕರಿಯಮ್ಮನ ಕಲ್ಲು, ಇರಾನಿ ಕಾಲೋನಿ, ಹನುಮಂತ ದೇವರ ಗುಡಿ, ಗಾರ್ಡನ್ ಲೈನ್, ಗಣಪತಿ ಗುಡಿ.

ವಾರ್ಡ್ ನಂ 28 ಕೃಷ್ಣ ಟ್ಯೂಷನ್ ಲೈನ್, ಸೊಲ್ಲಾಪಟ್ಟಿ ಲೈನ್. ವಾರ್ಡ್ ನಂ. 21, 22, 25 ಮೇರವಾಡೆ, ಗುಳಗುಂದಿ, ಭೂಮಾ, ರಾಮದಾಸ, ಚೆನ್ನಪ್ಪ ಹೊಸ ಲೈನ್, ಹಳೆ ಲೈನ್, ಸ್ಮಶಾನಗಟ್ಟಿ ಭಾಗ-1,2, ಅಕ್ಕಿ ಯವರ ಪ್ಲಾಟ್, ಮುನವಳ್ಳಿ ಪ್ಲಾಟ್, ಕಮತರ ಲೈನ್, ಕಾರದ ಬಟ್ಟಿ ಲೈನ್, ವಿಜಯನಗರ ಗಣಪತಿ ಗುಡಿ ಲೈನ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 26 ಹಳೆ ಬಸ್ ಸ್ಟ್ಯಾಂಡ್ ಲೈನ್, ದನದ ದವಾಖಾನೆ ಲೈನ್, ಜನತಾ ಕಿರಾಣಿ ಸ್ಟೋರ್, ಲಕ್ಷ್ಮೀ ಚಾಳ, ಬೇವಿನಕಟ್ಟಿ ಭಾಗ -1,2, ಸೋಡಾದಂಗಡಿ ಲೈನ್, ಬೂಸ್ಟ್ ಅಂಗಡಿ ಸಂದಿ, ಸಂಗಮ ದೇವ ಬಜಾರ್.

ವಾರ್ಡ್ ನಂ. 35 ದೇವರಾಜ ಹಾಸ್ಟೆಲ್ ಲೈನ್, ನೀಲಮ್ಮ ತಾಯಿ ಮಠ, 9ನಂ ಶಾಲೆ, ಆದರ್ಶ ನಗರ. ವಾರ್ಡ್ ನಂ. 5 ಶಿವನಾಗ ನಗರ 4 ಭಾಗಗಳು, ಗಣೇಶ ನಗರ 4 ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳ ಸಾಧನೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಕೃಷ್ಣಾಜಿ ರಂಗರಾವ್ ಕುಲಕರ್ಣಿ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಶ್ರವಣಕುಮಾರ ಗೂಳಪ್ಪನವರ ಹಾಗೂ ಫಾರೂಕ್ ಗಡಾದ ರಾಜ್ಯ ಮಟ್ಟದ ಇನ್‌ಸ್ಪೈರ್ ಅವಾರ್ಡ್ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ ಎಂದು ಮುಖ್ಯೋಪಾಧ್ಯಾಯ ಎಸ್.ಬಿ. ನಿಡಗುಂದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸತತ ಎರಡನೇ ಬಾರಿಗೆ ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಸ್ಪರ್ಧೆಗೆ ವಿದ್ಯಾರ್ಥಿಗಳು ಆಯ್ಕೆಯಾಗುವಲ್ಲಿ ಮಾರ್ಗದರ್ಶನ ನೀಡಿದ ಶಾಲೆಯ ವಿಜ್ಞಾನ ಶಿಕ್ಷಕಿ ಮಂಜುಳಾ ಜಾಧವ ಅವರನ್ನು ಮತ್ತು ಸಾಧನೆಗೈದ ವಿದ್ಯಾರ್ಥಿಗಳನ್ನು ಶಾಲಾ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಆನಂದರಾವ್ ಕುಲಕರ್ಣಿ, ಮುಖ್ಯೋಪಾಧ್ಯಾಯರು ಮತ್ತು ಸಿಬ್ಬಂದಿಯವರು ಅಭಿನಂದಿಸಿದ್ದಾರೆ.

## ನದಿಯಂತಾದ ಗ್ರಾಮದ ರಸ್ತೆಗಳು



■ವಿಜಯಸಾಕ್ಷಿ ಸುದ್ದಿ, ರೋಣ

ಶುಕ್ರವಾರ ಮಧ್ಯಾಹ್ನ ಸುರಿದ ಭಾರೀ ಮಳೆಗೆ ಮಾರನಬಸರಿ ಗ್ರಾಮ ತತ್ತರಿಸಿ ಹೋಗಿದ್ದು, ಗ್ರಾಮದ ರಸ್ತೆಗಳಲ್ಲಿ ಮಳೆ ನೀರು ನದಿಯಂತೆ ಹರಿಯತೊಡಗಿದೆ.

ಗಾಳಿ ವಿದ್ಯುತ್ ಕಂಪನಿಯವರು ತಮ್ಮ ವಾಹನಗಳ ಸಂಚಾರಕ್ಕೆ ನಿರ್ಮಿಸಿದ್ದ ತಾತ್ಕಾಲಿಕ ಸೇತುವೆಗಳು ಸಹ ವರುಣನ ಆರ್ಭಟಕ್ಕೆ ಕೊಚ್ಚಿ ಹೋಗಿವೆ.

ಕಳೆದ ನಾಲ್ಕಾರು ದಿನಗಳಿಂದ ಮಾರನಬಸರಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಮಳೆಯ ಆರ್ಭಟ ಜೋರಾಗಿದೆ.

ಶುಕ್ರವಾರ ಮಧ್ಯಾಹ್ನ ಸುರಿದ ಮಳೆಗೆ ಅನೇಕ ಅವಾಂತರಗಳು ಸೃಷ್ಟಿಯಾಗಿವೆ. ಜನತಾ ಪ್ಲಾಟ್ ಸೇರಿದಂತೆ ಸಂಕರ ಮಡ್ಡಿ ವಠಾರದಲ್ಲಿಯೂ ನದಿಯಂತೆ ಹರಿದ ಮಳೆ ನೀರಿನಿಂದ ನಾಗರಿಕ ಸಮುದಾಯ ಭಯ ಪಡುವಂತಾಗಿತ್ತು.

ಮಾರನಬಸರಿ ಹಾಗೂ ಜಕ್ಕಲಿ ಸಂಪರ್ಕದ ರಸ್ತೆ ಕೂಡ ಮಳೆ ನೀರಿನಿಂದ ತುಂಬಿ, ವಾಹನ ಸವಾರರು ಪರದಾಡುವಂತಾಯಿತು.

ಮುಖ್ಯವಾಗಿ ಮಾರನಬಸರಿ ಮತ್ತು ಕಳಕಾಪೂರ ರಸ್ತೆಯಲ್ಲಿ ಗಾಳಿ ವಿದ್ಯುತ್ ಕಂಪನಿಯವರು ತಮ್ಮ ವಾಹನಗಳು ಸಂಚರಿಸಲು ಅನಧಿಕೃತವಾಗಿ ಸೇತುವೆ ನಿರ್ಮಿಸಿಕೊಂಡಿದ್ದು, ಅದು ಸಹ ಮಳೆಯ ಹೊಡೆತಕ್ಕೆ ಕೊಚ್ಚಿ ಹೋಗಿದೆ.

ಇದು ಅಪಾಯಕ್ಕೆ ಆಹ್ವಾನ ನೀಡುವಂತಿದ್ದು, ಈ ರಸ್ತೆಗೆ ಹೊಂದಿಕೊಂಡು ಜಮೀನುಗಳಿವೆ.

ರೈತರು ಓಡಾಡುವ ಸಂದರ್ಭದಲ್ಲಿ ಅನಾಹುತ ಸಂಭವಿಸುವ ಸಾಧ್ಯತೆಯಿದ್ದು, ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಈ ಬಗ್ಗೆ ಸೂಕ್ತ ಕ್ರಮ ವಹಿಸಬೇಕು ಎಂದು ಸಾರ್ವಜನಿಕರು ಅಭಿಪ್ರಾಯಪಟ್ಟಿದ್ದಾರೆ.



### ಇಲಾಖಾಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಕಾರ್ಯನಿರ್ವಹಿಸಲು ಜಿಲ್ಲಾಧಿಕಾರಿ ಸೂಚನೆ

# ಜೂನ್ 14ರಿಂದ ಉಪಲೋಕಾಯುಕ್ತರ ಭೇಟಿ

■ವಿಜಯಸಾಕ್ಷಿ ಸುದ್ದಿ, ಗದಗ

ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಜೂನ್ 14ರಿಂದ 16ರವರೆಗೆ ಗದಗ ಜಿಲ್ಲೆಗೆ ಭೇಟಿ ನೀಡಲಿದ್ದು, ಈ ಸಂದರ್ಭದಲ್ಲಿ ಎಲ್ಲ ಇಲಾಖೆಗಳ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿದ್ದು ಸರಿಯಾಗಿ ಕಾರ್ಯನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ನಿರ್ದೇಶನ ನೀಡಿದರು.



ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ಉಪಲೋಕಾಯುಕ್ತರು ಜಿಲ್ಲೆಗೆ ಆಗಮಿಸಿದ ಸಂದರ್ಭದಲ್ಲಿ ಜಿಲ್ಲೆಯ ಸರ್ಕಾರಿ ಕಚೇರಿಗಳಿಗೆ ಹಾಗೂ ಸಂಸ್ಥೆಗಳಿಗೆ ಅನಿರೀಕ್ಷಿತ ಭೇಟಿ ನೀಡಲಿದ್ದಾರೆ ಎಂದರು.

ಜಿಲ್ಲಾ ಹಂತದ ಎಲ್ಲ ಇಲಾಖೆ ಅಧಿಕಾರಿಗಳು ತಮ್ಮ ಇಲಾಖೆ ವ್ಯಾಪ್ತಿಯಲ್ಲಿ ನಿರ್ವಹಿಸುವ ಕಾರ್ಯಗಳನ್ನು ಸರಿಯಾಗಿ ನಿಭಾಯಿಸಬೇಕು. ಕಚೇರಿಗೆ ಸಮಯಕ್ಕೆ ಸರಿಯಾಗಿ ಆಗಮಿಸಿ ಕಚೇರಿಯ ಬಾಕಿ ಉಳಿದ ಕೆಲಸಗಳನ್ನು ಪೂರ್ಣಗೊಳಿಸಬೇಕು. ಅಲ್ಲದೇ ಕಚೇರಿ ಹಾಗೂ ಸುತ್ತಮುತ್ತಲಿನ ಪರಿಸರವನ್ನು ಶುಚಿಯಾಗಿಟ್ಟುಕೊಳ್ಳಲು ಜಿಲ್ಲಾಧಿಕಾರಿಗಳು ಸೂಚಿಸಿದರು.



> ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಚೇರಿಗೆ ಆಗಮಿಸುವ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ನಡೆದುಕೊಳ್ಳಬೇಕು. ಉಪಲೋಕಾಯುಕ್ತರು ನಡೆಸುವ ಸಭೆಗೆ ಇಲಾಖೆಯ ಮುಖ್ಯಸ್ಥರು ಕಡ್ಡಾಯವಾಗಿ ಹಾಜರಿದ್ದು ತಮ್ಮ ಇಲಾಖೆಗೆ ಸಂಬಂಧಿಸಿದ ಸಂಪೂರ್ಣ ಮಾಹಿತಿಯೊಂದಿಗೆ ಆಗಮಿಸಬೇಕು. ಇಲಾಖೆಗೆ ಸಂಬಂಧಿಸಿದ ಬಾಕಿ ಪ್ರಕರಣಗಳ ಕುರಿತು ಅಗತ್ಯ ದಾಖಲೆಗಳೊಂದಿಗೆ ವಿಚಾರಣೆ ಸಂದರ್ಭದಲ್ಲಿ ಹಾಜರಿರಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಹಾಸ್ಟೆಲ್‌ಗಳು, ಜಿಲ್ಲಾ ಆಸ್ಪತ್ರೆ, ಪ್ರಾಥಮಿಕ ಆರೋಗ್ಯ ಕೇಂದ್ರ, ಅಂಗನವಾಡಿ ಕೇಂದ್ರಗಳು, ಶಾಲಾ ಕಾಲೇಜುಗಳಲ್ಲಿ ಸ್ವಚ್ಛತೆ ಕಾಪಾಡುವ ಜೊತೆಗೆ ಮೂಲಭೂತ ಸೌಲಭ್ಯಗಳ ಕೊರತೆಯಾಗದಂತೆ ಸಂಬಂಧಿತ ಅಧಿಕಾರಿಗಳು ನಿಗಾ ವಹಿಸಬೇಕು. ಲೋಕಾಯುಕ್ತರ ಭೇಟಿ ಸಂದರ್ಭದಲ್ಲಿ ಇಲಾಖೆಯ ಎಲ್ಲ ಹಂತದ ಅಧಿಕಾರಿಗಳು ಕಚೇರಿಯಲ್ಲಿ ಇರುವಂತೆ ನೋಡಿಕೊಳ್ಳಲು ಇಲಾಖಾ ಮುಖ್ಯಸ್ಥರಿಗೆ ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಸಕಾಲದಡಿ ಸ್ವೀಕೃತವಾಗಿರುವ ಅರ್ಜಿಗಳನ್ನು ಶೀಘ್ರ ವಿಲೇವಾರಿಗೊಳಿಸಬೇಕು. ಐಪಿಜಿಆರ್‌ಎಸ್, ಮುಖ್ಯಮಂತ್ರಿಗಳ ಜನತಾ ದರ್ಶನದಡಿ ಸ್ವೀಕೃತವಾಗಿರುವ ಅರ್ಜಿಗಳನ್ನು ಪ್ರಥಮಾದ್ಯತೆ ನೀಡಿ ವಿಲೇವಾರಿಗೆ ಸೂಕ್ತ ಕ್ರಮ ಕೈಗೊಳ್ಳಬೇಕು. ಪ್ರತಿ ಕಚೇರಿಗಳಲ್ಲಿಯೂ ಲೋಕಾಯುಕ್ತರ ಸೂಚನಾ ಫಲಕ ಅಳವಡಿಸಬೇಕು ಎಂದು ಸೂಚಿಸಿದರು.

ಎಲ್ಲ ಅಧಿಕಾರಿ ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಗುರುತಿನ ಚೀಟಿ ಧರಿಸಬೇಕು. ಹಾಜರಾತಿಗಾಗಿ ಬಯೋಮೆಟ್ರಿಕ್ ಅಳವಡಿಸಲು ಕ್ರಮ ಕೈಗೊಳ್ಳಬೇಕು. ಕಚೇರಿಗಳಲ್ಲಿ ಚಲನವಲನ ವಹಿ ಮತ್ತು ನಗದು ವಹಿ ಕಡ್ಡಾಯವಾಗಿ ನಿರ್ವಹಿಸಬೇಕೆಂದು ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಕೃತಕ ಅಭಾವ ಸೃಷ್ಟಿಯಾಗದಂತೆ ಕ್ರಮವಹಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯಲ್ಲಿ ಮುಂಗಾರು ಮಳೆ ತೀವ್ರಗೊಳ್ಳುತ್ತಿದೆ. ಜಿಲ್ಲೆಯ ಎರಡು ಮುಖ್ಯ ಹಳ್ಳಗಳಾದ ತುಪ್ಪರಿ ಹಳ್ಳ ಮತ್ತು ಬೆಣ್ಣಿ ಹಳ್ಳದ ಪ್ರವಾಹದ ಬಗ್ಗೆ ನಿರಂತರ ನಿಗಾ ವಹಿಸಿ, ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಎರಡು ಹಳ್ಳಗಳಿಗೆ ಸಂಬಂಧಿಸಿದ ಪಿಡಿಓಗಳು ಮತ್ತು ಗ್ರಾಮ ಆಡಳಿತ ಅಧಿಕಾರಿಗಳು ಸ್ಥಾನಿಕವಾಗಿ ಕೇಂದ್ರ ಸ್ಥಾನದಲ್ಲಿದ್ದು, ತಾಲೂಕು ಆಡಳಿತಕ್ಕೆ ಮತ್ತು ಜಿಲ್ಲಾಡಳಿತಕ್ಕೆ ನೀರಿನ ಮಟ್ಟದ ಏರಿಕೆ ಹಾಗೂ ಪ್ರವಾಹದ ಮಾಹಿತಿ ನೀಡಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಅವರು ಶುಕ್ರವಾರ ಬೆಳಿಗ್ಗೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ, ಜಿಲ್ಲೆಯ ಮಳೆ ಪ್ರಮಾಣ ಮತ್ತು ಹಾನಿ, ಕುಡಿಯುವ ನೀರು ಮತ್ತು ಮೇವು ಸಂಗ್ರಹಣೆ ಹಾಗೂ ಬೆಳೆಹಾನಿ ಪರಿಹಾರ ಪ್ರಗತಿ ಕುರಿತು ಪರಿಶೀಲಿಸಿದರು.

ಜಿಲ್ಲೆಯಲ್ಲಿ ಮುಂಗಾರು ಮಳೆ ಉತ್ತಮವಾಗಿ ಸುರಿಯುತ್ತಿದೆ. ರೈತರು ಬಿತ್ತನೆ ಆರಂಭಿಸಿದ್ದಾರೆ. ಕೆರೆಗಳು ತುಂಬುತ್ತಿವೆ. ಈ ಹಿನ್ನೆಲೆಯಲ್ಲಿ ಕಂದಾಯ, ಕೃಷಿ ಮತ್ತು ಪೊಲೀಸ್ ಇಲಾಖೆ ಜಾಗೃತಿ ವಹಿಸಿ, ಜನರ ಜೀವ ಹಾನಿ ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ರೈತರಿಗೆ ಸಕಾಲದಲ್ಲಿ ಬೀಜ, ಗೊಬ್ಬರ ಸಿಗುವಂತೆ ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.




#### ಬಿತ್ತನೆಗೆ ಬೀಜ, ಗೊಬ್ಬರ ಕೊರತೆ ಆಗದಿರಲಿ

ಜಿಲ್ಲೆಯಲ್ಲಿ ಈಗಾಗಲೇ ಅಗತ್ಯಕ್ಕಿಂತ ಹೆಚ್ಚು ವಿವಿಧ ಪ್ರಕಾರದ ಬೀಜ ಮತ್ತು ಗೊಬ್ಬರಗಳ ದಾಸ್ತಾನು ಇದೆ. ರೈತರ ಬೇಡಿಕೆಗೆ ಅನುಗುಣವಾಗಿ ಬೀಜ, ಗೊಬ್ಬರ ಪೂರೈಸಲಾಗುತ್ತಿದೆ. ಒಟ್ಟಾರೆ ಜಿಲ್ಲೆಯಲ್ಲಿ ಕಳೆದ ಒಂದು ವಾರದಲ್ಲಿ ಸರಾಸರಿ ಶೇ. 22ರಷ್ಟು ಭೂಮಿಯಲ್ಲಿ ಬಿತ್ತನೆ ಆಗಿದೆ. ಕಳೆದ ಎರಡಮೂರು ದಿನಗಳಿಂದ ಜಿಲ್ಲೆಯಲ್ಲಿ ಉತ್ತಮ ಮಳೆ ಆಗುತ್ತಿರುವದರಿಂದ ಬಿತ್ತನೆ ಕಾರ್ಯ ಮುಂದಿನ ದಿನಗಳಲ್ಲಿ ವೇಗ ಪಡೆಯುತ್ತದೆ. ಕೃಷಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಯಾವುದೇ ಬೀಜ, ಗೊಬ್ಬರದ ಕೊರತೆ, ಕೃತಕ ಅಭಾವ ಹಾಗೂ ನಿಗದಿತ ದರಕ್ಕಿಂತ ಹೆಚ್ಚು ಬೆಲೆಗೆ ಮಾರಾಟವಾಗದಂತೆ ಎಚ್ಚರಿಕೆ ವಹಿಸಬೇಕು. ರಶೀದಿ ಇಲ್ಲದೆ ಬೀಜ, ಗೊಬ್ಬರ ಮಾರಾಟ, ಅನಧಿಕೃತ ದಾಸ್ತಾನು, ಬೇರೆ ಗೊಬ್ಬರಗಳ ಜಿಂಕ್ ಲಿಂಕ್ ಕಂಡು ಬಂದಲ್ಲಿ ತಕ್ಷಣ ಅಧಿಕಾರಿಗಳು ಎಫ್‌ಐಆರ್ ದಾಖಲಿಸಿ, ಅಂತಹ ಅಂಗಡಿ ಸೀಜ್ ಮಾಡಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ನಿರ್ದೇಶಿಸಿದರು.

### ಬಿಂಕದಕಟ್ಟಿಯ ಹೈಟೆಕ್ ನರ್ಸಿಂಗ್ ಕೇಂದ್ರದಲ್ಲಿ ವಿತರಣೆಗೆ ಸಿದ್ಧವಾಗಿದೆ 70 ಸಾವಿರ ಸಸಿಗಳು

# ಹಸಿರು ಪ್ರೇಮಿಗಳ ಆಕರ್ಷಣೆಯ ಕೇಂದ್ರ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಕೃತಿಯ ಮಡಿಲು ಬಿಟ್ಟು ಮಾನವ ಬದುಕಲು ಸಾಧ್ಯವಿಲ್ಲ. ಇಂತಹ ಪರಿಸರ ಉಳಿಸಿ-ಬೆಳೆಸಿ, ಹಸಿರು ಸಮುದಾಯ ಸೃಷ್ಟಿಸುವ ಸಾಮಾಜಿಕ ಹೊಣೆಗಾರಿಕೆ ಎಲ್ಲರ ಮೇಲಿದೆ. ಹಸಿರು ಸಮುದಾಯ ನಿರ್ಮಿಸುವ ಸಂಕಲ್ಪದಿಂದಾಗಿ ಪ್ರಸಕ್ತ ವರ್ಷದಲ್ಲಿ 70 ಸಾವಿರ ಸಸಿಗಳನ್ನು ವಿತರಿಸುವ ಗುರಿ ನಿಗದಿ ಮಾಡಲಾಗಿದೆ ಎಂದು ಗದಗ ಸಾಮಾಜಿಕ ಅರಣ್ಯ ವಲಯ ಅಧಿಕಾರಿ ನವೀನ ನಾಯ್ಕ ಹೇಳಿದರು.

ಗದಗ ತಾಲೂಕಿನಾದ್ಯಂತ ಇರುವ ಸಾಮಾಜಿಕ ವಲಯದ ವ್ಯಾಪ್ತಿಯಲ್ಲಿ ಹಸಿರು ಸಮುದಾಯ ಸೃಷ್ಟಿಸುವ ಪ್ರಮುಖ ಉದ್ದೇಶದಿಂದಾಗಿಯೇ ಆರ್‌ಎಸ್‌ಪಿಡಿ, ಆರ್‌ಕೆವಿವಾಯ್ ಹಾಗೂ ನರೇಗಾ ಯೋಜನೆಗಳ ಅಡಿಯಲ್ಲಿ ರಿಯಾಯಿತಿ ದರದಲ್ಲಿ ಸಸಿಗಳನ್ನು ವಿತರಿಸಲಾಗುತ್ತಿದೆ.



ಮಾರುಕಟ್ಟೆಯಲ್ಲಿ ಒಂದು ವರ್ಷದ ಸಸಿಗೆ 40 ರೂ.ಗಳಿದ್ದರೆ 6 ರೂ.ಗಳಲ್ಲಿ ಆ ಸಸಿಗಳನ್ನು ಬಿಂಕದಕಟ್ಟಿಯ ಹೈಟೆಕ್ ನರ್ಸಿಂಗ್ ಕೇಂದ್ರ ವಿತರಿಸುವ ಮೂಲಕ ಸಸಿಗಳನ್ನು ನೆಡಲು ಪ್ರೇರಣೆ ನೀಡಲಿದೆ. ಬಿಂಕದಕಟ್ಟಿ ಹೈಟೆಕ್ ನರ್ಸಿಂಗ್ ಕೇಂದ್ರದಲ್ಲಿ ನುಗ್ಗೆ, ಸಾಗವಾನಿ, ಹುಣಸಿ, ಮಹಾಗನಿ, ನೆಲ್ಲಿ, ಬಿದಿರು, ಬೇವು ಸೇರಿದಂತೆ ವಿವಿಧ ತಳಿಯ ಸಸಿಗಳು ಲಭ್ಯವಿವೆ.

ಬಿಸಿಲಿನ ಬೇಗೆ ತಡೆಯಲು ತಂಪಾದ ವಾತಾವರಣ ನಿರ್ಮಿಸಿ ಮಳೆಗೆ ಅನುವು ಮಾಡಿಕೊಡುವ ಪರಿಸರ ಸೃಷ್ಟಿಗೆ ಸಸಿಗಳ ಬೆಳವಣಿಗೆ ಅತಿ ಮುಖ್ಯವಾಗಿದೆ. ಈ ಉದ್ದೇಶದಿಂದ ಕಳೆದ ವರ್ಷ 48 ಸಾವಿರ ಸಸಿಗಳನ್ನು ವಿತರಿಸಲಾಗಿದೆ. ಪ್ರಸಕ್ತ ವರ್ಷದಲ್ಲಿ 70 ಸಾವಿರ ಸಸಿಗಳನ್ನು ವಿತರಿಸುವ ಗುರಿ ನಿಗದಿ ಮಾಡಲಾಗಿದೆ. ಈ ಯೋಜನೆ ಅಡಿಯಲ್ಲಿ ರೈತರಿಗೆ ಹೆಚ್ಚಿನ ಆದ್ಯತೆಯನ್ನು ನೀಡಲಾಗಿದ್ದು, ರೈತರು ತಮ್ಮ ಉದ್ಯೋಗ ಗುರುತಿನ ಚೀಟಿಯ ಮೂಲಕ ಉಚಿತವಾಗಿ ಪಡೆಯಬಹುದು ಎಂದು ಅರಣ್ಯ ಅಧಿಕಾರಿ ನವೀನ ನಾಯ್ಕ ವಿವರಿಸಿದರು.

ಬೇಸಿಗೆ ಕಾಲದಲ್ಲಿ ನಮಗೆ ಬೇಕಾದ ಬೀಜಗಳನ್ನು ಜಿಲ್ಲೆಯಾದ್ಯಂತ ಸಂಚರಿಸಿ ಶೇಖರಣೆ ಮಾಡುತ್ತೇವೆ. ಲಭ್ಯವಿರದ ಬೀಜಗಳನ್ನು ಇತರೆ ಜಿಲ್ಲೆಗಳಿಂದ ತರಿಸುತ್ತೇವೆ. ಶ್ರೀಗಂಧ, ಕಬೂಬಿಯ, ನುಗ್ಗಿ, ಹೆಬ್ಬೇವು, ಬಿದಿರು ಬೀಜಗಳನ್ನು ಮೈಸೂರು, ದಾವಣಗೇರಿ, ಶಿವಮೊಗ್ಗದಿಂದ ತರಿಸುತ್ತೇವೆ. ಬೀಜಗಳಿಂದ ಸಸಿ ಬೆಳೆದು ಒಂದು ವರ್ಷ ಆದ ಬಳಿಕ ಪೂರೈಕೆ ಮಾಡುತ್ತೇವೆ ಎನ್ನುತ್ತಾರೆ ಉಪ ವಲಯ ಅರಣ್ಯಾಧಿಕಾರಿ ಎಸ್.ಎಮ್. ಲಮಾಣಿ.

> ರೈತರು, ಪರಿಸರ ಪ್ರೇಮಿಗಳು, ಶಾಲಾ ಕಾಲೇಜುಗಳು, ಸಂಘ-ಸಂಸ್ಥೆಗಳು ಸಸಿಗಳನ್ನು ನೆಡುವ ಮೂಲಕ ಹಸಿರು ಪರಿಸರ ಸೃಷ್ಟಿಸಿ ಪ್ರಕೃತಿಗೆ ಕೊಡುಗೆ ನೀಡಿ ಸಾಮಾಜಿಕ ಹೊಣೆಗಾರಿಕೆ ಮೆರೆಯಬೇಕಿದೆ. ಈ ಹಿನ್ನೆಲೆಯಲ್ಲಿ ಸಸಿ ಬೆಳವಣಿಗೆಗೆ ಮಳೆಗಾಲ ಪೂರಕವಾಗಿದೆ. ಅಗತ್ಯ ಸಸಿ ಪಡೆದು ನೆಡುವ ಮೂಲಕ ಪರಿಸರ ಪ್ರೇಮ ಮೆರೆಯಲು ಬಿಂಕದಕಟ್ಟಿ ಹೈಟೆಕ್ ನರ್ಸರಿ ಕೇಂದ್ರ ಕೈ ಬೀಸಿ ಕರೆಯುತ್ತಿದೆ.

# ರಾಷ್ಟ್ರಪತಿ ಮುರ್ಮು ಭೇಟಿಯಾದ ಮೋದಿ; ಸರ್ಕಾರ ರಚನೆಗೆ ಹಕ್ಕು ಮಂಡನೆ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಎನ್‌ಡಿಎ ನಾಯಕ ನರೇಂದ್ರ ಮೋದಿ ಅವರು ಶುಕ್ರವಾರ ರಾಷ್ಟ್ರಪತಿ ಭವನದಲ್ಲಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ, ಕೇಂದ್ರದಲ್ಲಿ ಸರ್ಕಾರ ರಚನೆಗೆ ಹಕ್ಕು ಮಂಡಿಸಿದರು. ಇದರ ಬೆನ್ನಲ್ಲೇ ರಾಷ್ಟ್ರಪತಿಗಳು ಎನ್‌ಡಿಎ ನಾಯಕ ಪ್ರಧಾನಿ ಮೋದಿಯವರನ್ನು ಸರ್ಕಾರ ರಚಿಸಲು ಆಹ್ವಾನಿಸಿದರು.

ನರೇಂದ್ರ ಮೋದಿ ಅವರು ಭಾನುವಾರ (ಜೂನ್ 9) ಸಂಜೆ 6 ಗಂಟೆಗೆ ಮೂರನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

ರಾಷ್ಟ್ರಪತಿಯವರನ್ನು ಭೇಟಿ ಮಾಡಿದ ಬಳಿಕ ಮಾತನಾಡಿದ ಪ್ರಧಾನಿ ಮೋದಿ, "ದೇಶಕ್ಕೆ ಸೇವೆ ಸಲ್ಲಿಸಲು ಜನರು ಮೂರನೇ ಬಾರಿಗೆ ಎನ್‌ಡಿಎ ಸರ್ಕಾರಕ್ಕೆ ಅವಕಾಶ ನೀಡಿದ್ದಾರೆ. ಕಳೆದ ಎರಡು ಅವಧಿಗಳಲ್ಲಿ, ದೇಶವು ಮುನ್ನಡೆದ ವೇಗದಲ್ಲಿ, ಪ್ರತಿಯೊಂದು ವಲಯದಲ್ಲಿ ಬದಲಾವಣೆಯು ಗೋಚರಿಸುತ್ತದೆ ಮತ್ತು 25 ಕೋಟಿ ಜನರು ಬಡತನದಿಂದ ಹೊರಬರುವುದು ಪ್ರತಿ ಭಾರತಕ್ಕೂ ಹೆಮ್ಮೆಯ ಕ್ಷಣವಾಗಿದೆ ಎಂದು ನಾನು ದೇಶದ ಜನರಿಗೆ ಭರವಸೆ ನೀಡುತ್ತೇನೆ" ಎಂದರು.

ರಾಷ್ಟ್ರವು ಈ ಸ್ಥಾನಮಾನದಿಂದ ಗಮನಾರ್ಹ ಪ್ರಯೋಜನಗಳನ್ನು ಪಡೆದುಕೊಳ್ಳಲು ಸಜ್ಜಾಗಿದೆ" ಎಂದು ಅವರು ಒತ್ತಿಹೇಳಿದರು. ಮುಂದಿನ ಐದು ವರ್ಷಗಳು ಜಾಗತಿಕ ಭೂದೃಶ್ಯದೊಳಗೆ ಭಾರತಕ್ಕೆ ಅತ್ಯಂತ ಅನುಕೂಲಕರವಾಗಿರುತ್ತದೆ ಎಂದು ವಿಶ್ವಾಸದಿಂದ ಭವಿಷ್ಯ ನುಡಿದರು. ಅವರು ದೇಶದ ಬೆಳೆಯುತ್ತಿರುವ ಪ್ರಭಾವವನ್ನು ಒತ್ತಿಹೇಳಿದ ಅವರು, ಮುಂಬರುವ ವರ್ಷಗಳಲ್ಲಿ ಅದು ಅಂತರಾಷ್ಟ್ರೀಯ ವೇದಿಕೆಯ ಮೇಲೆ ಸಕಾರಾತ್ಮಕ ಪರಿಣಾಮ ಬೀರಲಿದೆ ಎಂದರು.

ಪ್ರಪಂಚವು ಅನೇಕ ಬಿಕ್ಕಟ್ಟುಗಳು, ಅನೇಕ ಉದ್ವಿಗ್ನತೆಗಳು, ವಿಪತ್ತುಗಳ ಮೂಲಕ ಸಾಗುತ್ತಿದೆ ಭಾರತೀಯರು ನಾವು ಅದೃಷ್ಟವಂತರು, ಇಷ್ಟು ದೊಡ್ಡ ಬಿಕ್ಕಟ್ಟುಗಳ ಹೊರತಾಗಿಯೂ, ನಾವು ಇಂದು ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆ ಎಂದು ಕರೆಯಲ್ಪಡುತ್ತೇವೆ. ನಾವು ಬೆಳವಣಿಗೆಗಾಗಿ ಪ್ರಪಂಚದಲ್ಲಿ ಪ್ರಶಂಸೆಗೆ ಒಳಗಾಗುತ್ತೇವೆ" ಎಂದು ಹೇಳಿದರು.

ನರೇಂದ್ರ ಮೋದಿ ಅವರನ್ನು ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) ಸಂಸದೀಯ ಪಕ್ಷದ ನಾಯಕರಾಗಿ ಆಯ್ಕೆ ಮಾಡಲಾಯಿತು. ಆ ಮೂಲಕ ಅವರು ಮೂರನೇ ಬಾರಿಗೆ ಪ್ರಧಾನಿಯಾಗಲು ದಾರಿ ಮಾಡಿಕೊಟ್ಟರು. ಸಂಸತ್ತಿನಲ್ಲಿ ಹೊಸದಾಗಿ ಆಯ್ಕೆಯಾದ ಸಂಸದರ ಸಭೆಯೂ ನಡೆಯಿತು. ಸಂಸತ್ ಭವನದ ಸಂವಿದಾನ ಸದನದಲ್ಲಿ ನಡೆದ ಸಭೆಯಲ್ಲಿ ಪ್ರಧಾನಿ ಮೋದಿಯವರನ್ನು ಸ್ವಾಗತಿಸಲಾಯಿತು. ಸಭೆಯಲ್ಲಿ ಸೇರಲು ಆಗಮಿಸಿದ ಪ್ರಧಾನಿಯವರು ಗೌರವಪೂರ್ವಕವಾಗಿ ತಮ್ಮ ಹಣೆಯಿಂದ ಭಾರತದ ಸಂವಿಧಾನವನ್ನು ಸ್ಪರ್ಶಿಸಿದರು.

**ಮೇಧಾ ಪಾಟ್ಕರ್ ಮಾನನಷ್ಟ ಮೊಕದ್ದಮೆ ಪ್ರಕರಣ**

# ಶಿಕ್ಷೆ ಪ್ರಮಾಣ ಜುಲೈ 1ಕ್ಕೆ ಕಾಯ್ದಿರಿಸಿದ ಕೋರ್ಟ್



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಗುಜರಾತ್‌ನಲ್ಲಿ ಎನ್‌ಜಿಒ ಮುಖ್ಯಸ್ಥರಾಗಿದ್ದಾಗ ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿಕೆ ಸಕ್ಸೇನಾ ಅವರು ದಾಖಲಿಸಿದ ಮಾನನಷ್ಟ ಮೊಕದ್ದಮೆಯಲ್ಲಿ ಕಾರ್ಯಕರ್ತೆ ಮೇಧಾ ಪಾಟ್ಕರ್ ವಿರುದ್ಧದ ಶಿಕ್ಷೆಯ ಪ್ರಮಾಣವನ್ನು ದೆಹಲಿಯ ನ್ಯಾಯಾಲಯವು ಜುಲೈ 1 ಕ್ಕೆ ಕಾಯ್ದಿರಿಸಿದೆ.

ದೆಹಲಿ ಕಾನೂನು ಸೇವೆಗಳ ಪ್ರಾಧಿಕಾರ (ಡಿಎಲ್‌ಎಸ್‌ಎ) ಸಂತ್ರಸ್ತರ ಪರಿಣಾಮದ ವರದಿಯನ್ನು (ವಿಐಆರ್) ಸಲ್ಲಿಸಿರುವುದನ್ನು ಗಮನಿಸಿದ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ರಾಘವ್ ಶರ್ಮಾ ಆದೇಶವನ್ನು ಕಾಯ್ದಿರಿಸಿದ್ದಾರೆ.

ಆರೋಪಿಗೆ ಶಿಕ್ಷೆಯಾದ ನಂತರ ಸಂತ್ರಸ್ತರು ಅನುಭವಿಸಿದ ನಷ್ಟದ ಪ್ರಮಾಣವನ್ನು ನಿರ್ಣಯಿಸಲು ವರದಿಯನ್ನು ಸಿದ್ಧಪಡಿಸಲಾಗುತ್ತದೆ. ಅಪರಾಧವು ಗರಿಷ್ಠ ಎರಡು ವರ್ಷಗಳವರೆಗೆ ಸರಳ ಜೈಲು ಶಿಕ್ಷೆ ಅಥವಾ ದಂಡ ಅಥವಾ ಎರಡನ್ನೂ ಒಳಗೊಳ್ಳುತ್ತದೆ.

ಈ ಹಿಂದೆ ಮೇ 24 ರಂದು, ವಿಕೆ ಸಕ್ಸೇನಾ ಅವರನ್ನು "ಹೇಡಿ" ಎಂದು ಕರೆದ ಮೇಧಾ ಪಾಟ್ಕರ್ ಅವರ ಹೇಳಿಕೆಗಳು ಮತ್ತು ಹವಾಲಾ ವಹಿವಾಟಿನಲ್ಲಿ ಅವರು ಭಾಗಿಯಾಗಿದ್ದಾರೆ ಎಂದು ಆರೋಪಿಸಿರುವುದು ಮಾನಹಾನಿಕರ ಮಾತ್ರವಲ್ಲದೆ, ಅವರ ಬಗ್ಗೆ ನಕಾರಾತ್ಮಕ ಗ್ರಹಿಕೆಗಳನ್ನು ಹುಟ್ಟುಹಾಕಲು ರಚಿಸಲಾಗಿದೆ ಎಂದು ನ್ಯಾಯಾಲಯವು ಗಮನಿಸಿತ್ತು.

ಅಲ್ಲದೆ, ದೂರುದಾರರು ಗುಜರಾತ್‌ನ ಜನರು ಮತ್ತು ಅವರ ಸಂಪನ್ಮೂಲಗಳನ್ನು ವಿದೇಶಿ ಹಿತಾಸಕ್ತಿಗಳಿಗೆ ಅಡಮಾನವಿಟ್ಟಿದ್ದಾರೆ ಎಂಬ ಆರೋಪವು ಅವರ ಸಮಗ್ರತೆ ಮತ್ತು ಸಾರ್ವಜನಿಕ ಸೇವೆಯ ಮೇಲಿನ ನೇರ ದಾಳಿಯಾಗಿದೆ ಎಂದು ಅದು ಹೇಳಿದೆ. ಮೇ 30 ರಂದು ಶಿಕ್ಷೆಯ ಕುರಿತು ವಾದಗಳು ಪೂರ್ಣಗೊಂಡಿವೆ.

## 'ತಮಿಳುನಾಡಿನಲ್ಲಿ ನೀಟ್ ಪರೀಕ್ಷೆ ರದ್ದುಗೊಳಿಸಿ'; ಡಿಎಂಕೆ, ಎಐಎಡಿಎಂಕೆ ಆಗ್ರಹ

■ವಿಜಯಸಾಕ್ಷಿ ಸುದ್ದಿ, ತಮಿಳನಾಡು

ತಮಿಳುನಾಡಿನ ಆಡಳಿತಾರೂಢ ಡಿಎಂಕೆ ಮತ್ತು ಪ್ರತಿಪಕ್ಷ ಎಐಎಡಿಎಂಕೆ ಶುಕ್ರವಾರ ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ-ಪದವಿಪೂರ್ವ ಮೇಲೆ ದಾಳಿ ಮಾಡಿದ್ದು, ವೈದ್ಯಕೀಯ ಕಾಲೇಜುಗಳ ಪ್ರವೇಶಕ್ಕಾಗಿ ರಾಷ್ಟ್ರೀಯ ಮಟ್ಟದ ಪರೀಕ್ಷೆಯನ್ನು ರದ್ದುಗೊಳಿಸಬೇಕು ಎಂದು ಆಗ್ರಹಿಸಿವೆ.

ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯು 2024ರ ಜೂನ್ 4 ರಂದು ನೀಟ್-ಯುಜಿ ಫಲಿತಾಂಶಗಳನ್ನು ಘೋಷಿಸಿದ ಕೆಲವು ದಿನಗಳ ನಂತರ ನೀಟ್-ಯುಜಿ ಮೇಲೆ ಪ್ರಾದೇಶಿಕ ಪಕ್ಷಗಳಿಂದ ದಾಳಿ ನಡೆದಿದೆ. ಇದರಲ್ಲಿ ಹರಿಯಾಣದ 67 ವಿದ್ಯಾರ್ಥಿಗಳು ಪರಿಪೂರ್ಣ 720 ಅಂಕಗಳನ್ನು ಗಳಿಸುವ ಮೂಲಕ ಅಖಿಲ ಭಾರತ ಶ್ರೇಣಿಯನ್ನು ಹಂಚಿಕೊಂಡಿದ್ದಾರೆ.

ಫಲಿತಾಂಶಗಳು ದೇಶಾದ್ಯಂತ ಭಾರಿ ಕೋಲಾಹಲವನ್ನು ಉಂಟುಮಾಡಿದೆ, ಹಲವಾರು ಆಕಾಂಕ್ಷಿಗಳು ಮತ್ತು ಪೋಷಕರು ತನಿಖೆಗೆ ಒತ್ತಾಯಿಸಿದ್ದಾರೆ.

**ಓರ್ವ ವ್ಯಕ್ತಿಗೆ ಬದುಕಿನಲ್ಲಿ ಮುಖ್ಯವಾಗಿ ಬೇಕಾದದ್ದು ಯಾವುದು?**

# ದೈವದತ್ತ ಕೊಡುಗೆಗಳು



ಐಷಾರಾಮಿ ಹಾಸಿಗೆಯ ಮೇಲೆ ಮಲಗಬಹುದು... ನಿದ್ದೆಯನ್ನು ಕೊಳ್ಳಲು ಸಾಧ್ಯವಿಲ್ಲ,

ಮೃಷ್ಟಾನ್ನ ಭೋಜನ ತಟ್ಟೆಯಲ್ಲಿಹುದು... ಆದರೆ ಹಸಿವಿಲ್ಲ,

ಜಗತ್ತಿನ ಎಲ್ಲ ಸುಖಗಳು ಅಂಗೈಯಲ್ಲಿ ಸಿಗಬಹುದು... ಅನುಭವಿಸಲು ಆರೋಗ್ಯವಿಲ್ಲ

ಹಾಗಾದರೆ ಓರ್ವ ವ್ಯಕ್ತಿಗೆ ಬದುಕಿನಲ್ಲಿ ಮುಖ್ಯವಾಗಿ ಬೇಕಾದದ್ದು ಯಾವುದು? ಎಲ್ಲವೂ ಇದ್ದು ಏನೂ ಇಲ್ಲದಂತಹ ಮಾನಸಿಕ ವಿಷಣ್ಣತೆ ಮನುಷ್ಯನನ್ನು ಕಾಡುವುದಾದರೂ ಏಕೆ? ಇದಕ್ಕೆ ಪರಿಹಾರಗಳು ಉಂಟೆ?

ಖಂಡಿತವಾಗಿಯೂ... ಒಂದು ಸೂಕ್ಷ್ಮ ಜೀವಕೋಶದಿಂದ ಉದಿಸಿದ, ಒಂದು ಹತ್ತಾಗಿ ಹತ್ತು ಇಪ್ಪತ್ತಾಗಿ ಲಕ್ಷಾಂತರ ಜೀವಕೋಶಗಳ ಹೊಂದಿರುವ ಮನುಷ್ಯನ ನಿಜವಾದ ಅವಶ್ಯಕತೆಗಳು ಬಹಳವೇ ಕಡಿಮೆ. ತಾನು ತನ್ನದು ತನಗಾಗಿ ಎಂದು ಆತ ವೈಯುಕ್ತಿಕ ಪರಿಧಿಯಲ್ಲಿ ಯೋಚಿಸಲಾರಂಭಿಸಿದರೆ ಈ ಭೂಮಿಯ ಮೇಲಿರುವ ಎಲ್ಲವೂ ಆತನ ಬೇಡಿಕೆಯ ಪರಿಧಿಯಲ್ಲಿ ಬರುತ್ತದೆ.

ಮೂಲಭೂತವಾಗಿ ಮನುಷ್ಯನಿಗೆ ಮುಖ್ಯವಾಗಿ ಬೇಕಾಗಿರುವುದು ಒಂದೊಳ್ಳೆಯ ಆರೋಗ್ಯ, ಸೊಂಪಾದ ನಿದ್ರೆ, ಪೌಷ್ಟಿಕ ಆಹಾರ, ಪ್ರಕೃತಿಯೊಂದಿಗೆ ಒಡನಾಟ, ತನ್ನವರ ಪ್ರೀತಿ-ವಿಶ್ವಾಸ, ಸಮಯ ಮತ್ತು ತನ್ನಿಚ್ಛೆಯಂತೆ ಬದುಕುವ ಸ್ವಾತಂತ್ರ್ಯ. ಇವುಗಳಲ್ಲಿ ಕೆಲವನ್ನು ವೈಯುಕ್ತಿಕ ಸಾಧನೆಯ ಮೂಲಕ ಸಂಪಾದಿಸಿಕೊಂಡರೆ ಮತ್ತೆ ಕೆಲವು ದೈವದತ್ತ ಕೊಡುಗೆಗಳು. ಆದರೆ ಇವುಗಳ ನಡುವೆ ಪರಸ್ಪರ ಸಂಬಂಧವಿದೆ.

ಅದೆಷ್ಟೇ ಒಳ್ಳೆಯ ವಿದ್ಯೆ ಉದ್ಯೋಗಗಳನ್ನು ಹೊಂದಿದ್ದರೂ, ಸಾಮಾಜಿಕವಾಗಿ ಉನ್ನತ ಸ್ಥಾನಮಾನಗಳನ್ನು ಹೊಂದಿದ್ದರೂ ನಾವು ಮಾಡುವ ಕೆಲಸದಲ್ಲಿ ತೃಪ್ತಿ, ಸಮಾಧಾನಗಳು ದೊರೆಯದೆ ಹೋದಾಗ ತನ್ನಿಚ್ಛೆಯಂತೆ ಕಾರ್ಯನಿರ್ವಹಿಸುವ ಸ್ವಾತಂತ್ರ್ಯ ತನಗಿಲ್ಲದೆ ಹೋದಾಗ ಮನುಷ್ಯ ಅಶಾಂತಿಗೀಡಾಗುತ್ತಾನೆ.

ಈ ಅಶಾಂತಿ ಆತನ ಮಾನಸಿಕ ನೆಮ್ಮದಿಯನ್ನು ಕಸಿಯುತ್ತದೆ, ನಾನು ಕಾರ್ಯನಿರ್ವಹಿಸುತ್ತಿರುವ ಕ್ಷೇತ್ರದಲ್ಲಿ ತೊಂದರೆಯನ್ನು ಅನುಭವಿಸುವ ಆತ ಕಂಗೆಡುತ್ತಾನೆ. ಔದ್ಯೋಗಿಕವಾಗಿ ತನ್ನ ಹಿನ್ನಡೆಯನ್ನು ವೈಯುಕ್ತಿಕವಾಗಿಸಿಕೊಂಡು ನಿಧಾನವಾಗಿ ಧೂಮಪಾನ, ಮದ್ಯಪಾನಗಳಂತಹ ದುಶ್ಚಟಗಳಿಗೀಡಾಗುತ್ತಾನೆ. ಇದು ಆತನ ಮನೋ ದೈಹಿಕ ಆರೋಗ್ಯ ಕೆಡಲು ಕಾರಣವಾಗುತ್ತದೆ. ಈ ಹಿಂದೆ ಗಳಿಸಿ ಬಾಚಿ ಎತ್ತಿಟ್ಟ ಹಣ ಆತನ ಆತನ ಚಟಗಳಿಗೆ, ಆತನ ಆರೋಗ್ಯ ಸುಧಾರಿಸಲು ವ್ಯಯವಾಗುತ್ತದೆ.

ಇನ್ನು ಆತನ ಕುಟುಂಬಸ್ಥರಿಗೆ ಇದರ ಅರಿವಾಗುವ ಹೊತ್ತಿಗೆ ಕಾಲ ಮಿಂಚಿ ಹೋಗಿರುತ್ತದೆ. ಇಲ್ಲಿಯೂ ಕೂಡ ತಮ್ಮ ಅಹಮ್ಮಿನ ಕೋಟೆಯನ್ನೊಡೆದು ಯಾರಿಗೂ ತನಗಾಗುತ್ತಿರುವ ನೋವು ತೊಂದರೆಯನ್ನು ತಿಳಿಸದೇ ಇದ್ದರೆ ಪರಿಸ್ಥಿತಿ ಮತ್ತಷ್ಟು ಹದಗೆಡುತ್ತದೆ.

ಹೆಣ್ಣುಮಕ್ಕಳದು ಮತ್ತೊಂದು ರೀತಿ. ಹುಟ್ಟುವಾಗಲೇ ಅಯ್ಯೋ ಹೆಣ್ಣು ಮಗು ಎಂಬ ಭಾವ ಹುಟ್ಟಿದ ಮನೆಯಲ್ಲಿದ್ದರೆ ಆಕೆ ಕೇವಲ ಆ ಮನೆಯ ಮಗಳಾಗುತ್ತಾಳೆ. ಮುಂದೆ ಪರರ ಮನೆಗೆ ಹೋಗುವ ಸ್ವತ್ತು ಎಂಬಂತೆ ಜವಾಬ್ದಾರಿಯ ಹೊರೆಯಾಗುತ್ತಾಳೆ. ಒಂದು ಹಂತದ ವಿದ್ಯಾಭ್ಯಾಸ ಮುಗಿಸಿದ ನಂತರ ಆಕೆಗೆ ಯೋಗ್ಯ ವ್ಯಕ್ತಿಯೊಂದಿಗೆ ವಿವಾಹ ಮಾಡಿ ಗಂಡನ ಮನೆಗೆ ಕಳುಹಿಸಿ ಬಿಟ್ಟರೆ ತಮ್ಮ ಜವಾಬ್ದಾರಿ ಮುಗಿದಂತೆ ಎಂದು ಭಾವಿಸುವ ತಂದೆ ತಾಯಿಯ ಮಗಳಾದರೆ ಆಕೆ ಸಹಜವಾಗಿಯೇ ಕೀಳರಿಮೆಯಿಂದ ಬಳಲುತ್ತಾಳೆ. ಹುಟ್ಟಿದ ಮನೆಗೆ ಪರಕೀಯಳಾಗುವ ಆಕೆಯನ್ನು ಗಂಡನ ಮನೆಯವರು ಮತ್ತೊಂದು ಮನೆಯಿಂದ ಬಂದವಳು ಎಂಬಂತೆ ಭಾವಿಸಿದರೆ ಆಕೆಯ ಬದುಕು ಬಾಣಲೆಯಿಂದ ಬೆಂಕಿಗೆ ಬಿದ್ದಂತಾಗುತ್ತದೆ.

ಇದ್ದುದರಲ್ಲಿಯೇ ತಕ್ಕಮಟ್ಟಿಗೆ ವಿದ್ಯಾಭ್ಯಾಸ ಮಾಡಿ ಒಂದೊಳ್ಳೆಯ ಉದ್ಯೋಗ ಹೊಂದಿರುವ ಹೆಣ್ಣು ಮಕ್ಕಳ ಸ್ಥಿತಿ ಕೊಂಚ ಉತ್ತಮ. ತವರು ಮತ್ತು ಗಂಡನ ಮನೆ ಎರಡರಲ್ಲಿಯೂ ಪರಕೀಯ ಪ್ರಜ್ಞೆ ಅನುಭವಿಸುವ ಹೆಣ್ಣುಮಗಳ ಮುಂದೆ ಇರುವುದು ಕೇವಲ ಎರಡು ಆಯ್ಕೆಗಳು. ಮೆಟ್ಟಿದ ಮನೆಯ ಎಲ್ಲ ಜನರ ಮನವೊಲಿಸಿ ಅವರಿಗೆ ಬೇಕು ಬೇಕಾದಂತೆ ಮಾಡಿ ಬಡಿಸಿ ಅವರ ಚಾಕರಿ ಮಾಡುವುದು ಇಲ್ಲವೇ ತನಗೆ ಬೇಕಾದಂತೆ ಅವರನ್ನು ಒಪ್ಪಿಸಿ ಬದುಕುವುದು. ಭಾರತೀಯ ಸಾಮಾಜಿಕ ಸ್ಥಿತಿಗತಿಗಳಲ್ಲಿ ಮೊದಲನೆಯ ಆಯ್ಕೆ ಅತ್ಯಂತ ಸುಲಭವಾಗಿದ್ದು. ಬಹುತೇಕ ಹೆಣ್ಣು ಮಕ್ಕಳು ಸೊಲ್ಲೆತ್ತದೇ ಮೊದಲನೇ ಆಯ್ಕೆಯನ್ನು ಮಾಡಿಕೊಳ್ಳುತ್ತಾರೆ. ಅವರು ಕೂಡ ಜೀವನದ ಒಂದು ಹಂತದಲ್ಲಿ ಅಯ್ಯೋ ನಾವು ತಪ್ಪು ಮಾಡಿದೆವು ಎಂದು ಹಲುಬುತ್ತಾರೆ, ಸ್ವಯಂಕೃತ ಅಪರಾಧವಾದರೂ ಪಶ್ಚಾತಾಪ ತಪ್ಪಿದ್ದಲ್ಲ.

ಆದ್ದರಿಂದ ನಾವು ಮುಖ್ಯವಾಗಿ ಯೋಚಿಸ ಬೇಕಾಗಿರುವುದು, ಈ ಭೂಮಿಗೆ ನಾವು ಬರುವಾಗ ಏನನ್ನೂ ತಂದಿಲ್ಲ, ಹೋಗುವಾಗ ಏನನ್ನೂ ಒಯ್ಯುವುದಿಲ್ಲ. ಇರುವವರೆಗಿನ ಈ ಜೀವನದಲ್ಲಿ ಆಯ್ಕೆ ನಮ್ಮದು. ಕೈಗೆಟುಕದ್ದಕ್ಕೆ ಆಸೆ ಪಡದೆ ಇದ್ದುದರಲ್ಲಿಯೇ ಜೀವನ ಸಾಗಿಸಬೇಕು. ಸಾಧನೆಯ ಹಾದಿಯಲ್ಲಿ ಬರುವ ಎಲ್ಲ ಎಡರು ತೊಡರುಗಳನ್ನು ಆತ್ಮವಿಶ್ವಾಸದಿಂದ ಎದುರಿಸಬೇಕು.

ನೆನ್ನೆ ನಮ್ಮ ಕೈಯಲ್ಲಿಲ್ಲ. ನಾಳೆ ಏನಾಗುವುದು ಗೊತ್ತಿಲ್ಲ. ಆದರೆ ವರ್ತಮಾನ ಖಂಡಿತವಾಗಿಯೂ ನಮ್ಮದು ಎಂಬ ಹೊನ್ನುಡಿಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಒಳ್ಳೆಯ ಆರೋಗ್ಯ, ಸುಖಕರ ನಿದ್ದೆ, ಆಹಾರ, ಕೌಟುಂಬಿಕ ಪ್ರೀತಿ, ಸ್ನೇಹಿತರ ಸಾಂಗತ್ಯ, ನಿಮ್ಮಿಷ್ಟದಂತೆ ಬದುಕುವ ಸ್ವಾತಂತ್ರ್ಯದಂತಹ ದೈವದತ್ತ ಕೊಡುಗೆಗಳನ್ನು ನಮ್ಮದಾಗಿಸಿಕೊಂಡು ಸಾರ್ಥಕ ಬದುಕನ್ನು ಸಾಗಿಸೋಣ.

**– ವೀಣಾ ಹೇಮಂತ್ ಗೌಡ ಪಾಟೀಲ್.**
ಮುಂಡರಗಿ-ಗದಗ.

# ಸಂತ್ರಸ್ತೆ ಅಪಹರಣ ಪ್ರಕರಣ: ಭವಾನಿ ರೇವಣ್ಣಗೆ ಹೈಕೋರ್ಟ್‌ನಿಂದ ನಿರೀಕ್ಷಣಾ ಜಾಮೀನು



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹಾಸನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ತಾಯಿ ಭವಾನಿ ರೇವಣ್ಣ ವಿರುದ್ಧ ದಾಖಲಾಗಿದ್ದ ಅಪಹರಣ ಪ್ರಕರಣದಲ್ಲಿ ರಾಜ್ಯ ಹೈಕೋರ್ಟ್ ಶುಕ್ರವಾರ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ. ಆದರೆ, ಭವಾನಿ ಅವರು ತನಿಖೆಗೆ ಸಹಕರಿಸಬೇಕು, ಹಾಸನ ಅಥವಾ ಮೈಸೂರಿನ ಕೆಆರ್ ನಗರಕ್ಕೆ ಪ್ರವೇಶಿಸದಂತೆ ನ್ಯಾಯಾಲಯವು ಸೂಚನೆ ನೀಡಿದೆ.

ಜೂನ್ 1 ರಂದು, ವಿಶೇಷ ತನಿಖಾ ತಂಡವು (ಎಸ್‌ಐಟಿ) ಭವಾನಿ ಅವರಿಗೆ ತಮ್ಮ ಮಗನ ವಿರುದ್ಧ ಲೈಂಗಿಕ ಕಿರುಕುಳದ ಆರೋಪಕ್ಕೆ ಸಂಬಂಧಿಸಿದ ಅಪಹರಣ ಪ್ರಕರಣದಲ್ಲಿ ನಿಮ್ಮನ್ನು ಪ್ರಶ್ನಿಸುವ ಅಗತ್ಯವಿದ್ದು, ತಮ್ಮ ಮನೆಗೆ ಅಧಿಕಾರಿಗಳು ಹಾಜರಾಗುತ್ತಾರೆ ಎಂದು ನೋಟಿಸ್ ನೀಡಿತ್ತು.

ಅದೇ ದಿನ 'ಚೆನ್ನಾಂಬಿಕಾ ನಿಲಯ'ದ ಭವಾನಿ ಅವರ ಮನೆಗೆ ಎಸ್‌ಐಟಿ ದಳದ ತಂಡವೊಂದು ಆಗಮಿಸಿದಾಗ ಅವರು ಇರಲಿಲ್ಲ. ಮೈಸೂರು, ಹಾಸನ, ಬೆಂಗಳೂರು, ಮಂಡ್ಯ, ರಾಮನಗರ ಸೇರಿದಂತೆ ವಿವಿಧೆಡೆ ಎಸ್‌ಐಟಿ ಶೋಧ ನಡೆಸಿದೆ. ಭವಾನಿ ಪತ್ತೆಗಾಗಿ ಆಕೆಯ ಸಂಬಂಧಿಕರ ಮನೆಗಳಲ್ಲಿಯೂ ಸಹ ಹುಡುಕಾಟ ನಡೆಸಲಾಯಿತು. ಆದರೆ, ಈ ತಿಂಗಳ ಆರಂಭದಿಂದಲೂ ಅವರು ಪತ್ತೆಯಾಗಲಿಲ್ಲ.

ಹಲವಾರು ಮಹಿಳೆಯರಿಗೆ ಲೈಂಗಿಕ ದೌರ್ಜನ್ಯ ಎಸಗಿರುವ ಸ್ಪಷ್ಟ ವೀಡಿಯೊಗಳು ಏಪ್ರಿಲ್ 21 ರಂದು ಹೊರಬಂದ ನಂತರ, ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡರ ಪುತ್ರ ಹೆಚ್ ಡಿ ರೇವಣ್ಣ, ಅವರ ಪತ್ನಿ ಭವಾನಿ ಮತ್ತು ಪುತ್ರ ಪ್ರಜ್ವಲ್ ಮತ್ತು ಲೋಕಸಭೆ ಚುನಾವಣೆಯಲ್ಲಿ ಸೋತ ಪ್ರಜ್ವಲ್ ಅವರು ಪ್ರಕರಣದಲ್ಲಿ ಸಿಲುಕಿದ್ದಾರೆ. ಹಾಸನ ಕ್ಷೇತ್ರದ ಎನ್‌ಡಿಎ ಲೋಕಸಭಾ ಅಭ್ಯರ್ಥಿಯಾಗಿದ್ದ ಪ್ರಜ್ವಲ್ ಜರ್ಮನಿಗೆ ಪಲಾಯನ ಮಾಡಿದ್ದರು.

ಹಲವು ಮಹಿಳೆಯರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಪ್ರಜ್ವಲ್ ಅವರನ್ನು ಬಂಧಿಸಲಾಗಿದೆ. ಇದೇ ಪ್ರಕರಣದಲ್ಲಿ ಭವಾನಿ ಪತಿ ಹೊಳೆನರಸೀಪುರ ಜೆಡಿಎಸ್ ಶಾಸಕ ಎಚ್.ಡಿ. ರೇವಣ್ಣ ಕೂಡ ಜಾಮೀನಿನ ಮೇಲೆ ಇದ್ದಾರೆ.

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಅವರ ಶಿಫಾರಸಿನ ಮೇರೆಗೆ ಪ್ರಜ್ವಲ್ ವಿರುದ್ಧದ ಪ್ರಕರಣಗಳ ತನಿಖೆಗಾಗಿ ಕರ್ನಾಟಕ ಸರ್ಕಾರವು ಎಸ್‌ಐಟಿಯನ್ನು ರಚಿಸಿದ್ದು, ಈ ಕುರಿತು ತನಿಖೆ ನಡೆಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ.

ಲೈಂಗಿಕ ಕಿರುಕುಳದ ಆರೋಪ ಎದುರಿಸುತ್ತಿರುವ ಪ್ರಜ್ವಲ್ ಶುಕ್ರವಾರ ಜರ್ಮನಿಯಿಂದ ವಾಪಸಾಗಿದ್ದು, ಕೂಡಲೇ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಎಸ್‌ಐಟಿ ಅವರನ್ನು ಬಂಧಿಸಿದೆ. ನಗರದ ವಿಶೇಷ ನ್ಯಾಯಾಲಯ ಜೂನ್ 6ರವರೆಗೆ ಪೊಲೀಸ್ ಕಸ್ಟಡಿಗೆ ನೀಡಿದೆ.

# ಸಂಸತ್ ಆವರಣದಲ್ಲಿನ ಗಾಂಧಿ, ಅಂಬೇಡ್ಕರ್, ಶಿವಾಜಿ ಪ್ರತಿಮೆ ಸ್ಥಳಾಂತರ: ಕಾಂಗ್ರೆಸ್ ಕಿಡಿ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಂಸತ್ತಿನ ಆವರಣದಲ್ಲಿರುವ ಮಹಾತ್ಮ ಗಾಂಧಿ, ಡಾ.ಬಿ.ಆರ್ ಅಂಬೇಡ್ಕರ್ ಮತ್ತು ಛತ್ರಪತಿ ಶಿವಾಜಿಯ ಪ್ರತಿಮೆಗಳನ್ನು ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಸ್ಥಳಾಂತರಿಸುವುದರ ವಿರುದ್ಧ ಕಾಂಗ್ರೆಸ್ ಕಿಡಿಕಾರಿದೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ " ಸಂಸತ್ ಆವರಣದ ಪ್ರಮುಖ ಸ್ಥಳದಿಂದ ಪ್ರತಿಮೆಗಳನ್ನು ತೆಗೆದು ಹಾಕಲಾಗುತ್ತಿದೆ ಎಂದಿದ್ದಾರೆ.

ಜೈರಾಮ್ ರಮೇಶ್ ಹೇಳಿಕೆಯ ಬಳಿಕ ಈ ವಿಷಯ ದೇಶದಾದ್ಯಂತ ಚರ್ಚೆಗೀಡಾಗಿತ್ತು. ಇತರ ಪಕ್ಷಗಳ ನಾಯಕರು ಕೂಡ ಪ್ರತಿಮೆಗಳ ಸ್ಥಳಾಂತರ ಕುರಿತು ಪ್ರಶ್ನೆಯೆತ್ತಿದ್ದರು.

ಈ ಹಿನ್ನೆಲೆ, ಲೋಕಸಭಾ ಸೆಕ್ರೇಟರಿಯೇಟ್ ಸ್ಪಷ್ಟನೆ ಕೊಟ್ಟಿದ್ದು, "ನಾಯಕರು ಮತ್ತು ಸ್ವಾತಂತ್ರ್ಯ ಹೋರಾಟಗಾರರ ಪ್ರತಿಮೆಗಳನ್ನು ಸಂಸತ್ ಆವರಣದ 'ಪ್ರೇರಣಾ ಸ್ಥಳ'ಕ್ಕೆ ಸ್ಥಳಾಂತರಿಸಲಾಗಿದೆ. ಇದು ಕಳೆದ ವರ್ಷ ಮೇ ತಿಂಗಳಲ್ಲಿ ಉದ್ಘಾಟನೆಗೊಂಡ ಹೊಸ ಸಂಸತ್ ಭವನದ ನಿರ್ಮಾಣದ ನಂತರದ ಅಭಿವೃದ್ಧಿ ಕಾರ್ಯಗಳ ಭಾಗವಾಗಿದೆ" ಎಂದು ತಿಳಿಸಿದೆ.

ಪ್ರತಿಮೆಗಳನ್ನು ತೆರವು ಗೊಳಿಸಿಲ್ಲ, ಸ್ಥಳಾಂತರಿಸಲಾಗಿದೆ ಎಂದು ಹೇಳಿದೆ.

ಸಂಸತ್ ಸಂಕೀರ್ಣದ ವಿವಿಧ ಸ್ಥಳಗಳಲ್ಲಿ ಪ್ರತಿಮೆಗಳು ಇದ್ದಿದ್ದರಿಂದ ಸಂದರ್ಶಕರಿಗೆ ಅನಾನುಕೂಲವಾಗುತ್ತಿತ್ತು. ಹಾಗಾಗಿ, ಎಲ್ಲಾ ಪ್ರತಿಮೆಗಳನ್ನು ಸಂಸತ್ ಭವನದ ಸಂಕೀರ್ಣದಲ್ಲಿಯೇ ಭವ್ಯವಾದ ಪ್ರೇರಣಾ ಸ್ಥಳದಲ್ಲಿ ಗೌರವಯುತವಾಗಿ ಸ್ಥಾಪಿಸಲಾಗುತ್ತಿದೆ ಎಂದು ಲೋಕಸಭೆ ಸಚಿವಾಲಯ ಹೇಳಿದೆ.

# ಕಂಗನಾ ರಣಾವತ್‌ಗೆ ಕಪಾಳಮೋಕ್ಷ ಮಾಡಿದ ಸಿಐಎಸ್‌ಎಫ್ ಕಾನ್‌ಸ್ಟೆಬಲ್ ಅಮಾನತು, ಬಂಧನ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಹೊಸದಾಗಿ ಆಯ್ಕೆಯಾಗಿರುವ ಮಂಡಿ ಸಂಸದೆ ಮತು ನಟಿ ಕಂಗನಾ ರಣಾವತ್ ಅವರಿಗೆ ಚಂಡೀಗಢ ವಿಮಾನ ನಿಲ್ದಾಣದಲ್ಲಿ "ರೈತರಿಗೆ ಅಗೌರವ ತೋರಿದ" ಆರೋಪದ ಮೇಲೆ ಕಪಾಳಮೋಕ್ಷ ಮಾಡಿದ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆ (ಸಿಐಎಸ್‌ಎಫ್) ಕಾನ್‌ಸ್ಟೆಬಲ್ ಅನ್ನು ಶುಕ್ರವಾರ ಬಂಧಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

ಆರೋಪಿ ಕಾನ್‌ಸ್ಟೆಬಲ್ ಕುಲ್ವಿಂದರ್ ಕೌರ್ ವಿರುದ್ಧ ಪೊಲೀಸ್ ಪ್ರಕರಣ ದಾಖಲಾಗಿದ್ದು, ಗುರುವಾರ ರಣಾವತ್‌ಗೆ ಕಪಾಳಮೋಕ್ಷ ಮಾಡಿದ ನಂತರ ಆಕೆಯನ್ನು ಅಮಾನತುಗೊಳಿಸಲಾಗಿದೆ.

**ಪಕ್ಷಕ್ಕೆ ಮರಳಿದ ಮಹಾರಾಷ್ಟ್ರದ ಸ್ವತಂತ್ರ ಸಂಸದ**

# 100ಕ್ಕೆ ತಲುಪಿದ ಕಾಂಗ್ರೆಸ್ ಸಂಸದರ ಸಂಖ್ಯೆ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮಂಗಳವಾರ ಪ್ರಕಟವಾದ ಲೋಕಸಭೆಯ ಫಲಿತಾಂಶದಲ್ಲಿ ಕಾಂಗ್ರೆಸ್ ತನ್ನ ಸಾಧನೆಯನ್ನು ಅಗಾಧವಾಗಿ ಸುಧಾರಿಸಿದೆ. 99 ಇದ್ದ ಸಂಸದರ ಸಂಖ್ಯೆಯು ಇದೀಗ ನೂರು ತಲುಪಿದ್ದು, ತನ್ನ ಖಾತೆಗೆ ಮತ್ತೊಬ್ಬ ಸಂಸದರನ್ನು ಸೇರಿಸಿಕೊಂಡಿದೆ.

ಮಹಾರಾಷ್ಟ್ರದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಗೆದ್ದಿರುವ ಕಾಂಗ್ರೆಸ್ ಬಂಡಾಯ ಅಭ್ಯರ್ಥಿ ವಿಶಾಲ್ ಪಾಟೀಲ್ ಗುರುವಾರ ಪಕ್ಷಕ್ಕೆ ಬೆಂಬಲ ವ್ಯಕ್ತಪಡಿಸಿದರು. ಚುನಾವಣೆಯಲ್ಲಿ ಕಾಂಗ್ರೆಸ್ 99 ಸ್ಥಾನಗಳನ್ನು ಗೆದ್ದಿತ್ತು. ವಿಶಾಲ್ ಪಾಟೀಲ್ ಅವರ ಬೆಂಬಲದೊಂದಿಗೆ ಲೋಕಸಭೆಯಲ್ಲಿ ಕಾಂಗ್ರೆಸ್ ಬಲ 100ಕ್ಕೆ ಏರಲಿದೆ ಎಂದು ಪಕ್ಷದೊಳಗೆ ಹೋರಾಟ ನಡೆಸಿದ್ದ ಕಾಂಗ್ರೆಸ್ ಶಾಸಕ ವಿಶ್ವಜಿತ್ ಕದಂ ಹೇಳಿದ್ದಾರೆ.

ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ವಸಂತದಾದಾ ಪಾಟೀಲ್ ಅವರ ಮೊಮ್ಮಗ ವಿಶಾಲ್ ಪಾಟೀಲ್ ಅವರು ಸಾಂಗ್ಲಿ ಕ್ಷೇತ್ರದಿಂದ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯ ಸಂಜಯ್ಕಾಕ ಪಾಟೀಲ್ ಅವರನ್ನು ಸೋಲಿಸಿದರು.

ಮಹಾರಾಷ್ಟ್ರ ವಿಕಾಸ್ ಅಘಾಡಿ (ಎಂವಿಎ) ಪಾಲುದಾರರ ನಡುವೆ ಸೀಟು ಹಂಚಿಕೆ ವ್ಯವಸ್ಥೆಯಲ್ಲಿ ಸಾಂಗ್ಲಿ ಸಂಸದೀಯ ಸ್ಥಾನವನ್ನು ಶಿವಸೇನೆ-ಯುಬಿಟಿಗೆ ಬಿಟ್ಟುಕೊಟ್ಟ ನಂತರ ಅವರು ಬಂಡಾಯವೆದ್ದು ಸ್ವತಂತ್ರವಾಗಿ ಸ್ಪರ್ಧಿಸಿದ್ದರು.

ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ, "ಸಾಂಗ್ಲಿಯಿಂದ ಚುನಾಯಿತ ಸಂಸದ ವಿಶಾಲ್ ಪಾಟೀಲ್ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲವನ್ನು ಸ್ವಾಗತಿಸುತ್ತೇನೆ" ಎಂದು ಹೇಳಿದ್ದಾರೆ.

ಉದ್ಧವ್ ಠಾಕ್ರೆ ಸೇನಾ ಬಣದ ಸೀಟು ಒಪ್ಪಂದಕ್ಕೆ ಮುಂಚೆಯೇ ತನ್ನದೇ ಅಭ್ಯರ್ಥಿಯನ್ನು ಘೋಷಿಸಿದ ಕ್ರಮವು ಮಹಾರಾಷ್ಟ್ರ ವಿರೋಧ ಪಕ್ಷದ ಮೈತ್ರಿಯಲ್ಲಿ ಸ್ವಲ್ಪ ಘರ್ಷಣೆಯನ್ನು ಉಂಟುಮಾಡಿದೆ. ತನ್ನ ನಿರ್ಧಾರವನ್ನು ಮರುಪರಿಶೀಲಿಸುವಂತೆ ಕಾಂಗ್ರೆಸ್ ಪದೇಪದೆ ಶಿವಸೇನೆಗೆ ಮನವಿ ಮಾಡಿತ್ತು.

ವಿಶಾಲ್ ಪಾಟೀಲ್ ಮತ್ತು ವಿಶ್ವಜಿತ್ ಕದಂ ನಿನ್ನೆ ಖರ್ಗೆ ಮತ್ತು ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರನ್ನು ಭೇಟಿಯಾದರು. ಸ್ವತಂತ್ರ ಸಂಸದರು ಪಕ್ಷಕ್ಕೆ ತಮ್ಮ ಬೆಂಬಲ ಪತ್ರವನ್ನು ನೀಡಿದರು.

ಲೋಕಸಭೆಯ ಸೆಕ್ರೆಟರಿಯೇಟ್ ಒಪ್ಪಿಗೆ ನೀಡಿದರೆ, ವಿಶಾಲ್ ಪಾಟೀಲ್ ಅವರನ್ನು ಕಾಂಗ್ರೆಸ್‌ನ ಸಹ ಸಂಸದ ಎಂದು ಕರೆಯಬಹುದು ಮತ್ತು ಲೋಕಸಭೆಯಲ್ಲಿ ಪಕ್ಷದ ಬಲ 100 ಆಗಲಿದೆ ಎಂದು ಮುಖಂಡರು ಹೇಳಿದರು.

ಬಿಹಾರದ ಪೂರ್ಣಿಯಾದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಗೆದ್ದಿರುವ ಮತ್ತೊಬ್ಬ ನಾಯಕ ಪಪ್ಪು ಯಾದವ್ ಕೂಡ ಕಾಂಗ್ರೆಸ್‌ಗೆ ಬೆಂಬಲ ನೀಡುವ ನಿರೀಕ್ಷೆಯಿದೆ. ಚುನಾವಣೆಗೂ ಮುನ್ನ ತಮ್ಮದೇ ಪಕ್ಷವನ್ನು ಕಾಂಗ್ರೆಸ್ ಜೊತೆ ವಿಲೀನಗೊಳಿಸಿದ್ದರು. ಬಿಹಾರದ ಪ್ರತಿಪಕ್ಷ ಸ್ಥಾನದ ಒಪ್ಪಂದದಲ್ಲಿ ಪೂರ್ಣಿಯಾ ಸ್ಥಾನವು ಆರ್‌ಜೆಡಿ ಪಾಲು ಹೋದಾಗ, ಪಪ್ಪು ಯಾದವ್ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಿದರು.

### ಶ್ರೀ ರಂಭಾಪುರಿ ಜಗದ್ಗುರುಗಳ ಪುರ ಪ್ರವೇಶ, ಧರ್ಮ ಜಾಗೃತಿ ಸಮಾರಂಭ

# ನೆಮ್ಮದಿಯ ಬದುಕಿಗೆ ಧರ್ಮವೇ ಮೂಲ

■ವಿಜಯಸಾಕ್ಷಿ ಸುದ್ದಿ, ಆಲೂರು

ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಸುಖ ಬಯಸುವ ಮನುಷ್ಯ ಧರ್ಮ ಪರಿಪಾಲನೆ ಮಾಡುವುದನ್ನು ಮರೆಯುತ್ತಾನೆ. ಆದರೆ ಸುಖ-ಶಾಂತಿಯ ಬದುಕಿಗೆ ಧರ್ಮವೇ ಮೂಲ ಎಂಬುದನ್ನು ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದಲ್ಲಿ ಆಲೂರು ತಾಲೂಕ ವೀರಶೈವ ಲಿಂಗಾಯತ ಸಮಾಜದಿಂದ ಆಯೋಜಿಸಿದ ಶ್ರೀ ರಂಭಾಪುರಿ ಜಗದ್ಗುರುಗಳ ಪುರ ಪ್ರವೇಶ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮ, ಸಂಸ್ಕೃತಿ ಮತ್ತು ಪರಂಪರೆ ಮನುಷ್ಯನ ನಂಬಿಕೆಯ ಮೇಲೆ ನಿಂತುಕೊಂಡಿವೆ. ನಂಬಿಕೆಯೇ ಜೀವನದ ಮೂಲ ಸೆಲೆ. ನಂಬಿಕೆ ಇದ್ದರೆ ಏನೆಲ್ಲಾ ಇದೆ. ನಂಬಿಕೆ ಇಲ್ಲದವರಿಗೆ ಯಾವುದೂ ಇಲ್ಲ. ಕಣ್ಣು ಚೆನ್ನಾಗಿದ್ದರೆ ಜಗ ಚೆನ್ನಾಗಿ ಕಾಣುತ್ತದೆ. ನಾಲಿಗೆ ಚೆನ್ನಾಗಿದ್ದರೆ ಜನತೆಗೆ ಚೆನ್ನಾಗಿ ಕಾಣುತ್ತೇವೆ. ವಿದ್ಯೆ, ದುಡಿಮೆ ಮತ್ತು ತಾಳ್ಮೆ ಜೀವನದ ಶ್ರೇಯಸ್ಸಿಗೆ ಅಡಿಪಾಯ. ವೀರಶೈವ ಧರ್ಮ ಆದರ್ಶ ಮೌಲ್ಯಗಳನ್ನು ಪ್ರತಿಪಾದಿಸಿದೆ. ಸಕಲ ಜೀವಾತ್ಮರಿಗೆ ಸದಾ ಲೇಸನ್ನೇ ಬಯಸಿದ ವೀರಶೈವ ಧರ್ಮ ಬಹಳ ಪ್ರಾಚೀನವಾದ ಧರ್ಮ. ಇದಕ್ಕೊಂದು ಇತಿಹಾಸ ಭವ್ಯ ಪರಂಪರೆಯಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಮಹಾಮುನಿ ಅಗಸ್ತ್ಯರಿಗೆ ಶಿವಾದ್ವೈತ ತತ್ವ ಸಿದ್ಧಾಂತವನ್ನು ಬೋಧಿಸಿ ಉದ್ಧರಿಸಿದ ಇತಿಹಾಸವಿದೆ.

ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾಧ್ಯಕ್ಷ ಬಿ.ಆರ್. ಗುರುದೇವ ಸಮಾರಂಭ ಉದ್ಘಾಟಿಸಿ ಮಾತನಾಡಿ, ಜೀವ ಜಗತ್ತಿನ ಶ್ರೇಯಸ್ಸಿಗೆ ಧರ್ಮಾಚರಣೆ ಮುಖ್ಯ. ಧರ್ಮ ಪಾಲನೆ ಮಾಡದಿದ್ದರೆ ಆಘಾತ ತಪ್ಪಿದ್ದಲ್ಲ. ವೀರಶೈವ ಧರ್ಮದ ಪಂಚ ಪೀಠಗಳು ಯಾವಾಗಲೂ ಧರ್ಮ ಸಂಸ್ಕೃತಿಯ ಸಂವರ್ಧನೆಗಾಗಿ ಸದಾ ಶ್ರಮಿಸುತ್ತಿವೆ. ಶ್ರೀ ರಂಭಾಪುರಿ ಜಗದ್ಗುರುಗಳ ದಿವ್ಯ ಸಂದೇಶ ನಮ್ಮೆಲ್ಲರ ಬದುಕಿಗೆ ದಿಕ್ಸೂಚಿಯಾಗಿದೆ ಎಂದರು.

ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ ಸಮಾರಂಭದಲ್ಲಿ



ಸಂಕಲಾಪುರ ಮಠದ ಧರ್ಮರಾಜೇಂದ್ರ ಸ್ವಾಮಿಗಳು, ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು, ಯಸಳೂರು ಚನ್ನಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು, ಹಾರನಹಳ್ಳಿ ಶಿವಯೋಗಿ ಶಿವಾಚಾರ್ಯ ಸ್ವಾಮಿಗಳು, ತಣ್ಣೀರುಹಳ್ಳ ಮಠದ ವಿಜಯಕುಮಾರ ಸ್ವಾಮಿಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಆಲೂರು ಶಾಸಕ ಸಿಮೆಂಟ್ ಮಂಜು, ಅ.ಭಾ.ವೀ.ಮ ರಾಷ್ಟ್ರೀಯ ಕಾರ್ಯಕಾರಿಣಿ ಘಟಕದ ಸದಸ್ಯ ಸಿದ್ದೇಶ್ ನಾಗೇಂದ್ರ, ಮಲೆನಾಡು ವೀರಶೈವ ಸಂಘದ ಅಧ್ಯಕ್ಷ ದೇವರಾಜು, ಮಾಜಿ ಶಾಸಕ ಹೆಚ್.ಕೆ. ಕುಮಾರಸ್ವಾಮಿ, ಬೇಲೂರು ಶಿವಕುಮಾರ ಸ್ವಾಮೀಜಿ, ಸಮುದಾಯ ಭವನದ ಮಾಜಿ ಅಧ್ಯಕ್ಷ ಎಮ್.ಎಸ್. ಪರಮಶಿವಪ್ಪ, ಬಾಳ್ಳುಪೇಟೆಯ ಬಿ.ಎಸ್. ಮಲ್ಲಿಕಾರ್ಜುನ್, ತಾಲೂಕಾ ವೀ.ಲಿಂ ಸಂಘದ ಮಾಜಿ ಅಧ್ಯಕ್ಷ ಕೆ.ಎ. ಕೊಟ್ಟೂರಪ್ಪ, ಮಲೆನಾಡು ಅ.ಮಂಡಳಿ ಮಾಜಿ ಅಧ್ಯಕ್ಷ ಹೆಚ್.ಪಿ. ಮೋಹನ್, ಹೆಚ್.ಡಿ.ಸಿ.ಸಿ.ಬ್ಯಾಂಕ್ ನಿರ್ದೇಶಕ ಜಗದೀಶ ಕಬ್ಬಿನಹಳ್ಳಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು.

ತಾಲ್ಲೂಕಾ ವೀರಶೈವ ಲಿಂಗಾಯತ ಸಂಘದ ಅಧ್ಯಕ್ಷ ಬಿ.ರೇಣುಕ ಪ್ರಸಾದ್ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಎಸ್.ಎಸ್. ಶಿವಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಪಾರ್ವತಿ ಮಲ್ಲೇಶ ಸಂಗಡಿಗರಿಂದ ಪ್ರಾರ್ಥನೆ, ಡಾ. ಎಂ.ಈ. ಜಯರಾಜ್‌ರಿಂದ ಸ್ವಾಗತ ಜರುಗಿತು. ಶಾಂತಾ ಆನಂದ ನಿರೂಪಿಸಿದರು. ಆರ್.ಎಸ್. ನಟರಾಜು ವಂದನಾರ್ಪಣೆ ಸಲ್ಲಿಸಿದರು.

ಧಾರ್ಮಿಕವಾಗಿ ಹಾಗೂ ಸಾಮಾಜಿಕವಾಗಿ ವೀರಶೈವ ಧರ್ಮ ಅದ್ಭುತ ಕೊಡುಗೆಯನ್ನು ಕೊಟ್ಟಿದೆ. ವೈಚಾರಿಕತೆ ಮತ್ತು ಸುಧಾರಣೆಯ ನೆಪದಲ್ಲಿ ಧರ್ಮ ಸಂಸ್ಕೃತಿಯ ಬಗೆಗೆ ನಿರ್ಲಕ್ಷ್ಯ ಮನೋಭಾವ ತಾಳುತ್ತಿರುವ ಕಾರಣ ಜಗದಲ್ಲಿ ಅಶಾಂತಿ, ಸಂಘರ್ಷ ಹೆಚ್ಚುತ್ತಿರುವುದನ್ನು ಕಾಣುತ್ತೇವೆ. ದ್ವೇಷ ಮರೆತು ಪ್ರೀತಿ, ವಿಶ್ವಾಸ ಹೆಚ್ಚಿದಾಗ ಜಗದಲ್ಲಿ ಶಾಂತಿ ನೆಲೆಗೊಳ್ಳಲು ಸಾಧ್ಯವಾಗುತ್ತದೆ ಎಂದು ರಂಭಾಪುರಿ ಶ್ರೀಗಳು ನುಡಿದರು.

## ಈದ್ಗಾ ಮೈದಾನ ಅಭಿವೃದ್ಧಿ ಅನುದಾನ ಬಿಡುಗಡೆಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಮುಳುಗುಂದ

ಮುಳಗುಂದ ಈದ್ಗಾ ಮೈದಾನದ ಅಭಿವೃದ್ಧಿಯ ಅನುದಾನ ಬಿಡುಗಡೆ ಮಾಡುವಂತೆ ಖಿದ್ಮತ್-ಎ-ಮಿಲ್ಲತ್ ಗ್ರೂಪ್ ವತಿಯಿಂದ ಗದಗ ಜಿಲ್ಲಾ ವಕ್ಫ ಸಲಹಾ ಸಮಿತಿ ಅಧ್ಯಕ್ಷ ಜಿ.ಎಂ. ದಂಡಿನ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಲಾಯಿತು.

ಈಗಿರುವ ಈದ್ಗಾ ಮೈದಾನವು ಚಿಕ್ಕದಾಗುತ್ತಿದೆ. ಜನಸಂಖ್ಯೆ ಹೆಚ್ಚಾದಂತೆ ನಮಾಜ್ ಮಾಡಲು ಜಾಗದ ಅಡಚಣೆ ಉಂಟಾಗುತ್ತಿದೆ. ಇನ್ನಷ್ಟು ವಿಸ್ತರಣೆ ಮಾಡಿ ಅಭಿವೃದ್ಧಿಗೊಳಿಸುವ ಉದ್ದೇಶವಿದ್ದು, ಅಭಿವೃದ್ಧಿಗೆ ಅನುದಾನ ಕೊರತೆ ಇರುವುದರಿಂದ ಅನುದಾನವನ್ನು ಶೀಘ್ರವೇ ವಕ್ಫನಿಂದ ಬಿಡುಗಡೆ ಮಾಡುವಂತೆ ಸಂಘದ ವತಿಯಿಂದ ಹಿರಿಯರಾದ ತಾಜುದ್ದೀನ್ ಕಿಂಡ್ರಿಯವರು ಮನವಿ ಓದಿ ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ಹಿರಿಯರಾದ ಹಮೀದ ಮುಜಾವರ, ರಫೀಕ ದಲೀಲ, ರಾಜೇಸಾಬ ಸೈಯದಬಡೆ, ಚಮನಸಾಬ ಹಾದಿಮನಿ, ಹೈದರಅಲಿ ಖವಾಸ, ಮುನ್ನಾ ಢಾಲಾಯತ, ಹುಸೇನ ಅಕ್ಕಿ, ಮಾಬುಲಿ ದುರ್ಗಿಗುಡಿ, ಖಲಂದರ ಗಾಡಿ, ದಾವೂದ್ ಜಮಾಲ್ ಮುಂತಾದವರು ಉಪಸ್ಥಿತರಿದ್ದರು.

## ಕುಗ್ರಾಮಗಳ ಚಹರೆ ಬದಲಿಸಿದ ಎಸ್‌ಬಿಐ ಫೌಂಡೇಷನ್

■ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ತಾಲೂಕಿನ ಪೇಠಾಲೂರ, ಬಸಾಪುರ, ಹಾರೋಗೇರಿ, ಕೆಲೂರು ಮತ್ತು ತಾಮ್ರಗುಂಡಿ ಗ್ರಾಮಗಳನ್ನು ಎಸ್‌ಬಿಐ ಫೌಂಡೇಷನ್‌ನ ಗ್ರಾಮ ಸೇವಾ ಯೋಜನೆಯಡಿ ಆಯ್ಕೆ ಮಾಡಲಾಗಿದ್ದು, ಹೊಸ ರೂಪ ಪಡೆದಿದೆ. ಸಂಕಲ್ಪ ರೂರಲ್ ಡೆವಲಪ್‌ಮೆಂಟ್ ಸೊಸೈಟಿಯ ಎನ್‌ಜಿಒ ಸಹಯೋಗದೊಂದಿಗೆ ಪ್ರತಿಷ್ಠಾನವು ಈ ಹಳ್ಳಿಗಳಲ್ಲಿ ಅನೇಕ ಬದಲಾವಣೆಗಳನ್ನು ಕೈಗೊಂಡಿದೆ.

ಇಲ್ಲಿನ ಎಲ್ಲಾ ಗ್ರಂಥಾಲಯಗಳನ್ನು ಡಿಜಿಟಲೀಕರಣಗೊಳಿಸುವುದು, ಶಿಥಿಲಗೊಂಡಿರುವ ಸರ್ಕಾರಿ ಶಾಲಾ ಕಟ್ಟಡಗಳ ಜೀರ್ಣೋದ್ಧಾರ, ಶುದ್ಧ




ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದೆ. ಜೊತೆಗೆ ಸುಸಜ್ಜಿತ ಸಮುದಾಯ ಶೌಚಾಲಯಗಳು, ಬಸ್ ನಿಲ್ದಾಣಗಳು ಮತ್ತು ತೆರೆದ ಜಿಮ್‌ಗಳನ್ನು ಸ್ಥಾಪಿಸಲಾಗಿದೆ.

ರೈತರಿಗೆ ಕೃಷಿಯ ಹೊಸ ತಂತ್ರಗಳ ಬಗ್ಗೆ ಸಲಹೆ ನೀಡಿ, ಸಸಿಗಳನ್ನು ವಿತರಿಸಲಾಗಿದೆ. ಎನ್‌ಜಿಒ ಸಿಬ್ಬಂದಿ ನಿಯತಕಾಲಿಕವಾಗಿ ರೈತರನ್ನು ಭೇಟಿ ಮಾಡಿ, ಕೊಯ್ಲಿಗೆ ಮಾರ್ಗದರ್ಶನ ನೀಡುತ್ತಿದ್ದರು. ಈಗ ಸುಮಾರು 4 ವರ್ಷಗಳಾಗಿದ್ದು, ಈ ಐದು ಹಿಂದುಳಿದ ಗ್ರಾಮಗಳಲ್ಲಿ ಎಸ್‌ಬಿಐ ಅಡಿಪಾಯ ಕಾಮಗಾರಿಗೆ ಗ್ರಾಮಸ್ಥರು ಸಂತಸ ವ್ಯಕ್ತಪಡಿಸಿದ್ದಾರೆ ಎಂದು ಎಸ್‌ಬಿಐ ಫೌಂಡೇಶನ್‌ನ ಸಿದ್ಧಲಿಂಗೇಶ ತಿಳಿಸಿದ್ದಾರೆ.

### ರಾಜ್ಯ ಅಲ್ಪ ಸಂಖ್ಯಾತರ ಆಯೋಗದ ಅಧ್ಯಕ್ಷರಾಗಿ ಯು ನಿಸಾರ್ ಅಹ್ಮದ್ ನಾಮನಿರ್ದೇಶನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ನಿವೃತ್ತ ಐಪಿಎಸ್ ಅಧಿಕಾರಿ ಯು ನಿಸಾರ್ ಅಹ್ಮದ್ ಅವರನ್ನು ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗದ ಅಧ್ಯಕ್ಷರನ್ನಾಗಿ ಸರ್ಕಾರ ನಾಮ ನಿರ್ದೇಶನ ಮಾಡಿದೆ.

ಈ ಸಂಬಂಧ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ನಾಗರಾಜ್ ಅವರು ಜೂನ್ 7ರಂದು ಅಧಿಸೂಚನೆ ಹೊರಡಿಸಿದ್ದಾರೆ.

ಅಧಿಸೂಚನೆಯಲ್ಲಿ, "ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಕಾಯ್ದೆ 1994ರ ಸೆಕ್ಷನ್ 3(1) ಮತ್ತು 4(1) ರ ಅಡಿಯಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ನಿವೃತ್ತ ಐಜಿಪಿ ಯು ನಿಸಾರ್ ಅಹ್ಮದ್, ಬೆಂಗಳೂರು ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರನ್ನಾಗಿ ನಾಮನಿರ್ದೇಶನಗೊಳಿಸಲಾಗಿದೆ" ಎಂದು ಉಲ್ಲೇಖಿಸಲಾಗಿದೆ.

ಇತ್ತೀಚೆಗಷ್ಟೇ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷರ ಹುದ್ದೆಯಿಂದ ವಿಧಾನ ಪರಿಷತ್‌ನ ಮಾಜಿ ಸದಸ್ಯ ಅಬ್ದುಲ್ ಅಝೀಮ್ ಅವರ ನಾಮ ನಿರ್ದೇಶನವನ್ನು ರಾಜ್ಯ ಸರ್ಕಾರ ಹಿಂಪಡೆದಿತ್ತು. ಈ ಕ್ರಮವನ್ನು ಹೈಕೋರ್ಟ್ ಕೂಡ ಎತ್ತಿ ಹಿಡಿದಿತ್ತು. ಈಗ ತೆರವಾಗಿರುವ ಅಧ್ಯಕ್ಷರ ಸ್ಥಾನಕ್ಕೆ ನಿವೃತ್ತ ಐಜಿಪಿ ಯು ನಿಸಾರ್ ಅಹ್ಮದ್ ಅವರನ್ನು ನಾಮನಿರ್ದೇಶನಗೊಳಿಸಿ ಆದೇಶ ಹೊರಡಿಸಿದೆ.

ಯು ನಿಸಾರ್ ಅಹ್ಮದ್ ಅವರು 2012ರಲ್ಲಿ ರಾಜ್ಯದ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್( ಐಜಿಪಿ) ಆಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ್ದರು. ಅದಕ್ಕೂ ಮುನ್ನ 2007ರಿಂದ 2011ರವರೆಗೆ ಬೆಂಗಳೂರು ನಗರದಲ್ಲಿ ಹೆಚ್ಚುವರಿ ಪೊಲೀಸ್ ಆಯುಕ್ತರಾಗಿ ಸೇವೆ ಸಲ್ಲಿಸಿದ್ದರು.

## ಪರಿಸರ ಮಾನವನ ಜೀವಾಳ

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಸುತ್ತಲಿನ ಪ್ರಕೃತಿ ಮತ್ತು ಪರಿಸರಗಳು ಮಾನವನ ಜೀವನವನ್ನು ನಿರ್ಧರಿಸುವ ಅಮೂಲ್ಯ ಸಂಪತ್ತು. ನಮ್ಮೆಲ್ಲರ ಪ್ರಾಣವಾಗಿರುವ ಪರಿಸರ ಇತ್ತೀಚೆಗೆ ಮನುಷ್ಯನ ಅತಿಯಾಸೆ, ಲೋಪಗಳಿಂದಾಗಿ ತೀವ್ರವಾದ ಹಾನಿಗೆ ಒಳಗಾಗುತ್ತಿದೆ. ಹೀಗಾಗಿ ಅಕಾಲದಲ್ಲಿ ಅತಿವೃಷ್ಟಿ, ಅನಾವೃಷ್ಟಿ, ಭೂಕುಸಿತ, ಪ್ರವಾಹಗಳು ಉಂಟಾಗಿ ಜನಜೀವನ ಅಸ್ತವ್ಯಸ್ತವಾಗಿ ಬದುಕು ದಿನದಿಂದ ದಿನಕ್ಕೆ ಹದಗೆಡುತ್ತಿದೆ. ಪಂಚಭೂತಗಳಿಂದಾದ ಈ ಮಾನವ ದೇಹ ಪಂಚಭೂತಗಳನ್ನು ಒಳಗೊಂಡ ಪ್ರಕೃತಿಯ ಮೇಲೆ ಸಂಪೂರ್ಣ ಅವಲಂಬಿತ. ಬದುಕು ನಿರ್ವಿಘ್ನವಾಗಿ ಸಾಗಬೇಕಾದರೆ ಪರಿಸರದ ಉಳಿವು ಅವಶ್ಯಕ ಎಂದು ಸ್ಟುಡೆಂಟ್ ಎಜುಕೇಶನ್ ಸಂಸ್ಥೆಯ ಚೇರಮನ್



ಪ್ರೊ. ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.

ನಗರದ ಸನ್ಮಾರ್ಗ ಕಾಲೇಜಿನಲ್ಲಿ ಜರುಗಿದ ಪರಿಸರ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಂದ ವೃಕ್ಷಾರೋಪಣ ನೆರವೇರಿಸಿ ಪ್ರಾಚಾರ್ಯ ಪ್ರೇಮಾನಂದ ರೋಣದ ಮಾತನಾಡಿ, ಪ್ರಕೃತಿ-ಪರಿಸರ ಉಳಿದರೆ ಮಾತ್ರ ಮಾನವನ ಜೀವ ಸುರಕ್ಷಿತ. ಹೀಗಾಗಿ ಪರಿಸರವನ್ನು ಉಳಿಸಿ ಬೆಳೆಸುವ ಕಾರ್ಯವಾಗಲಿ ಎಂದರು.

ಸಂಸ್ಥೆಯ ಆಡಳಿತಾಧಿಕಾರಿ ಎಂ.ಸಿ. ಹಿರೇಮಠ ಹಾಗೂ ಪದಾಧಿಕಾರಿಗಳಾದ ಪ್ರೊ. ರೋಹಿತ ಒಡೆಯರ್, ಪ್ರೊ. ರಾಹುಲ ಒಡೆಯರ್, ಪ್ರೊ. ಸೈಯದ ಮತಿನ್ ಮುಲ್ಲಾ, ಪ್ರೊ. ಪುನೀತ ದೇಶಪಾಂಡೆ, ಬೋಧಕ-ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿ ವೃಂದದವರು ಉಪಸ್ಥಿತರಿದ್ದರು. ಪ್ರೊ. ಪರಶುರಾಮ ಕೊಟ್ನಿಕಲ್ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ವಿಜಯ ಹೆಬಸೂರ ವಂದಿಸಿದರು.

#### ಬಿಜೆಪಿ ಮಿತ್ರ ಪಕ್ಷಗಳಿಗೆ ಎಚ್ಚರಿಕೆ ನೀಡಿದ ಆದಿತ್ಯ ಠಾಕ್ರೆ...

## ಸ್ಪೀಕರ್ ಸ್ಥಾನವನ್ನು ಪಡೆಯಿರಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಶಿವಸೇನಾ (ಯುಬಿಟಿ) ಪಕ್ಷವು ಎನ್‌ಡಿಎಗೆ ಮರಳಲಿದೆ ಎಂಬ ಊಹಾಪೋಗಳ ನಡುವೆಯೆ, ಯುವ ನಾಯಕ ಆದಿತ್ಯ ಠಾಕ್ರೆ ಅವರು ಕೇಂದ್ರದಲ್ಲಿ ಸರ್ಕಾರ ರಚಿಸುವ ನಿರೀಕ್ಷೆಯಲ್ಲಿರುವ ಬಿಜೆಪಿ ಮಿತ್ರಪಕ್ಷಗಳಿಗೆ ತಮ್ಮ ಸಲಹೆಯನ್ನು ನೀಡಿದ್ದು, 'ಸ್ಪೀಕರ್ ಸ್ಥಾನ ಪಡೆಯಿರಿ' ಎಂದು ಎಚ್ಚರಿಕೆ ನೀಡಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, "ಬಿಜೆಪಿ ಹೊಸದಾಗಿ ನೆನಪಿಸಿಕೊಳ್ಳುತ್ತಿರುವ ಎನ್‌ಡಿಎ ಸಂಭಾವ್ಯ ಮಿತ್ರಪಕ್ಷಗಳಿಗೆ ಒಂದು ವಿನಮ್ರ ಸಲಹೆ, ಸ್ಪೀಕರ್ ಹುದ್ದೆಯನ್ನು ಪಡೆಯಿರಿ. ಬಿಜೆಪಿಯ ತಂತ್ರಗಳನ್ನು ಅನುಭವಿಸಿದ್ದೇವೆ, ಅವರು ನಿಮ್ಮೊಂದಿಗೆ ಸರ್ಕಾರವನ್ನು ರಚಿಸುವ ನಿಮಿಷದಲ್ಲಿ ಭರವಸೆಗಳನ್ನು ಮುರಿದು, ನಿಮ್ಮ ಪಕ್ಷಗಳನ್ನೂ ಒಡೆಯಲು ಪ್ರಯತ್ನಿಸುತ್ತಾರೆ" ಎಂದು ಅವರು ಟಿಡಿಪಿ ಮತ್ತು ಜೆಡಿಯು ಪಕ್ಷಗಳನ್ನು ಟ್ಯಾಗ್ ಮಾಡಿದ್ದಾರೆ.

ಇಂದು ಬೆಳಿಗ್ಗೆ, ಬಿಜೆಪಿ ನೇತೃತ್ವದ ಎನ್‌ಡಿಎ, ಭಾನುವಾರದ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೂ ಮುನ್ನ ನರೇಂದ್ರ ಮೋದಿ ಅವರನ್ನು ನಾಯಕನನ್ನಾಗಿ ಆಯ್ಕೆ ಮಾಡಲು ಸಂಸತ್ತಿನ ಸೆಂಟ್ರಲ್ ಹಾಲ್‌ನಲ್ಲಿ ಹೊಸದಾಗಿ ಚುನಾಯಿತ ಸಂಸದರ ಸಭೆ ನಡೆಸಿತು.

## ರೈತ ಬಾಂಧವರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನ ಮುಂಗಾರು ಹಂಗಾಮಿಗೆ ಗದಗ ಜಿಲ್ಲೆಗೆ ಅವಶ್ಯವಿರುವ ವಿವಿಧ ಬೆಳೆಗಳ ಬಿತ್ತನೆ ಬೀಜಗಳ ಹಾಗೂ ರಸಗೊಬ್ಬರದ ಪ್ರಮಾಣವನ್ನು ದಾಸ್ತಾನು ಮಾಡಲಾಗಿದ್ದು, ಬಿತ್ತನೆ ಬೀಜದ ಹಾಗೂ ರಸಗೊಬ್ಬರದ ಅಭಾವ ಇರುವುದಿಲ್ಲ. ಬೇಡಿಕೆಯನ್ವಯ 7918 ಕ್ವಿಂಟಲ್ ವಿವಿಧ ಬೆಳೆಗಳ ಬಿತ್ತನೆ ಬೀಜಗಳಿಗೆ ಬೇಡಿಕೆ ಸಲ್ಲಿಸಲಾಗಿರುತ್ತದೆ. ಈವರೆಗೂ 4194 ಕ್ವಿಂಟಲ್ ಪೂರೈಕೆಯಾಗಿರುತ್ತದೆ.

ಇಲ್ಲಿಯವರೆಗೆ 2075 ಕ್ವಿಂಟಲ್ ವಿವಿಧ ಬೆಳೆಗಳ ಬಿತ್ತನೆ ಬೀಜ ರೈತ ಸಂಪರ್ಕ ಕೇಂದ್ರಗಳು ಹಾಗೂ ಹೆಚ್ಚುವರಿ ಬೀಜ ವಿತರಣಾ ಕೇಂದ್ರಗಳ ಮೂಲಕ ವಿತರಣೆಯಾಗಿದ್ದು, ಬೀಜ ವಿತರಣೆ ಪ್ರಗತಿಯಲ್ಲಿರುತ್ತದೆ. ಯಾವುದೇ ಬೆಳೆಯ ಬಿತ್ತನೆ ಬೀಜಗಳ ಅಭಾವ ಇರುವುದಿಲ್ಲ. ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಒಟ್ಟು 20280 ಮೆಟ್ರಿಕ್ ಟನ್ ರಸಗೊಬ್ಬರ ಮಾರಾಟವಾಗಿರುತ್ತದೆ. ಪ್ರಸ್ತುತ 15938 ಮೆಟ್ರಿಕ್ ಟನ್ ವಿವಿಧ ಶ್ರೇಣಿಯ ರಸಗೊಬ್ಬರದ ದಾಸ್ತಾನು ಇದೆ ಹಾಗೂ ರಸಗೊಬ್ಬರದ ಅಭಾವ ಇರುವುದಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ ವಾರ್ತೆ



**ಮಾಹಾಂತಪ್ಪ ಪಟ್ಟಣಶೆಟ್ಟಿ**

ಮುಳಗುಂದ: ಪಟ್ಟಣದ ಬಂಡಿಓಣಿ ನಿವಾಸಿ ಮಾಹಾಂತಪ್ಪ ಪಟ್ಟಣಶೆಟ್ಟಿ (81) ಶುಕ್ರವಾರ ನಿಧನರಾಗಿದ್ದಾರೆ. ಮೃತರು ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

## ನಿಧನ ವಾರ್ತೆ



**ಮಲ್ಲಪ್ಪ ಶಿವಪ್ಪ ಹಳ್ಳಿ**

ಲಕ್ಕುಂಡಿ: ಇಲ್ಲಿಯ ಪ್ರಗತಿಪರ ರೈತ ಮಲ್ಲಪ್ಪ ಶಿವಪ್ಪ ಹಳ್ಳಿ (62) ಗುರುವಾರ ನಿಧನರಾದರು. ತೋಟಗಾರಿಕೆ ಬೆಳೆಗಳನ್ನು ಬೆಳೆಯುವುದರಲ್ಲಿ ಸಾಧನೆ ಮಾಡಿದ್ದ ಇವರು ಹಲವು ಸಂಘ-ಸಂಸ್ಥೆಗಳಿಂದ ಪ್ರಶಸ್ತಿ ಪಡೆದಿದ್ದರು. ಮೃತರು, ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

### ಬಸವ ಯೋಗ ಕೇಂದ್ರದಲ್ಲಿ ವಿಶ್ವ ಪರಿಸರ ದಿನಾಚರಣೆ

# ಪರಿಸರ ಸಕಲ ಜೀವರಾಶಿಗಳ ಜೀವಾಳ

■ವಿಜಯಸಾಕ್ಷಿ ಸುದ್ದಿ, ಗದಗ

ಗಿಡಮರಗಳು ಸಕಲ ಜೀವಿಗಳಿಗೆ ಉಪಕಾರಿಯಾಗಿವೆ. ಪಶು-ಪಕ್ಷಿಗಳಿಗೆ ಆಹಾರ, ಆಶ್ರಯ ನೀಡುತ್ತವೆ. ಪೂಜೆ, ಅಲಂಕಾರಕ್ಕೆ ಬಗೆಬಗೆಯ ಹೂವು, ಹಣ್ಣುಗಳನ್ನು ಕೊಡುತ್ತವೆ, ದಣಿವು ನಿವಾರಣೆಗೆ ನೆರಳು ನೀಡುತ್ತವೆ, ಹೆಚ್ಚಿನ ತಾಪಮಾನ ನಿಯಂತ್ರಿಸುತ್ತವೆ, ಮಳೆ ಸುರಿಸುತ್ತಿವೆ. ಎಲ್ಲಕ್ಕೂ ಮಿಗಿಲಾಗಿ ಎಲ್ಲರೂ ಜೀವಿಸಿರಲು ಶುದ್ಧ ಗಾಳಿ ಉತ್ಪಾದಿಸುತ್ತವೆ. ಗಿಡಮರಗಳ ಈ ಎಲ್ಲ ಉಪಯೋಗವನ್ನು ಜಾತಿ-ಮತ-ಪಂಥಗಳ, ಬೇಧ-ಭಾವ, ಭಿನ್ನತೆ ಇಲ್ಲದೆ ನಾವೆಲ್ಲ ಪಡೆಯುತ್ತೇವೆ. ಹೀಗಾಗಿ ಗಿಡಮರಗಳು 'ಸಮಾನತೆ'ಯ ಹರಿಕಾರರೆನ್ನಬಹುದು ಎಂದು ಗದಗ ಜಿಲ್ಲಾ ಆಯುಷ್ ಅಧಿಕಾರಿ ಡಾ. ಎಂ.ಎಸ್. ಉಪ್ಪಿನ ಅಭಿಪ್ರಾಯಪಟ್ಟರು.

ಇಲ್ಲಿನ ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಸಿದ್ಧಲಿಂಗ ನಗರ ಇವರ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ(ಬಸವಪ್ರಭೆ ಕ್ಯಾಂಪಸ್)ದಲ್ಲಿ ಜರುಗಿದ ವಿಶ್ವ ಪರಿಸರ ದಿನಾಚರಣೆ



ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಾವು ನೆಟ್ಟ ಸಸಿ ದೊಡ್ಡದಾಗಿ ಬೆಳೆಯುವವರೆಗೆ ಕಾಳಜಿ ವಹಿಸಬೇಕು. ಪರಿಸರ ಸಂರಕ್ಷಣೆ ನಮ್ಮ ಮೂಲಭೂತ ಕರ್ತವ್ಯವಾಗಬೇಕು.

ನಮ್ಮ ಕೌಟುಂಬಿಕ ಕಾರ್ಯಕ್ರಮಗಳನ್ನು ಸಸಿ ನೆಡುವ ಮೂಲಕ ಆಚರಿಸಿ ಅವನ್ನು ಸಾಮಾಜಿಕ ಕಾರ್ಯಕ್ರಮಗಳನ್ನಾಗಿ ರೂಪಿಸಬೇಕೆಂದು ಸೂಚಿಸಿದರು.

ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಮಾತನಾಡಿ, ನಾವು ಆರೋಗ್ಯದಿಂದಿರಬೇಕಾದರೆ ಆಹಾರ, ನೀರುಗಳಂತೆ ಗಾಳಿಯೂ ಅಗತ್ಯವಾಗಿದೆ. ಗಾಳಿ ಇರದಿದ್ದರೆ ನಾವಿಲ್ಲ. ಅದಕ್ಕಾಗಿ ಜೀವಮಾನದಲ್ಲಿ ಒಂದು ಗಿಡವನ್ನಾದರೂ ಬೆಳೆಸಲು ಪ್ರಯತ್ನಿಸಬೇಕೆಂದರು. ನಿವೃತ್ತ ಗ್ರಂಥಪಾಲಕ ವಿ.ಎಂ. ಮುಂದಿನಮನಿ ಮಾತನಾಡಿದರು.

ಗೌರಿ ಜಿರಂಕಳಿ, ಸುನಂದಾ ಜಾನೋಪಂತರ ಪರಿಸರ ಗೀತೆ ಹೇಳಿದರು. ಮುಂಬರುವ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಗದಗ ಜಿಲ್ಲಾ ಮಟ್ಟದಲ್ಲಿ ಜರುಗುವ 'ಯೋಗ ಸಾಂಘಿಕ ಕಾರ್ಯಕ್ರಮ'ಗಳ ಮಾಹಿತಿ ಪತ್ರಿಕೆಗಳನ್ನು ಗದಗ ಜಿಲ್ಲಾ ಆಯುಷ್ ಅಧಿಕಾರಿ ಡಾ. ಎಂ.ಎಸ್. ಉಪ್ಪಿನ ಬಿಡುಗಡೆಗೊಳಿಸಿದರು.

ವೇದಿಕೆಯಲ್ಲಿ ನಿವೃತ್ತ ಇಂಜಿನಿಯರ್ ವಿ.ಎಚ್. ಪಾಟೀಲ, ನಿವೃತ್ತ ಕೃಷಿ ವಿಜ್ಞಾನಿ ಡಾ. ಎಸ್. ಕೆ. ನಾಲತ್ವಾಡಮಠ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಹಿರಿಯ ಸದಸ್ಯೆ ಅರುಣಾ ಇಂಗಳಳ್ಳಿ, ನವೀನ ಪಲ್ಲೇದ ಉಪಸ್ಥಿತರಿದ್ದರು. ಗಿರಿಜಾ ನಾಲತ್ವಾಡಮಠ ಮತ್ತು ಸಂಗಡಿಗರು ಪ್ರಾರ್ಥನೆ ಹೇಳಿದರು. ವಿ.ಎಂ. ಮುಂದಿನಮನಿ ಸ್ವಾಗತಿಸಿದರು. ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿ ತಿಳಿಸಿದರು. ಶಾಂತಾ ಮುಂದಿನಮನಿ ಕಾರ್ಯಕ್ರಮ ನಿರೂಪಿಸಿದರು. ವಿಜಯಾ ಚನ್ನಶೆಟ್ಟಿ ವಂದಿಸಿದರು.

ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಸಹಪ್ರಾಧ್ಯಾಪಕ ಡಾ. ಡಿ.ಜಿ. ಕೋಲ್ಮಿ ಮಾತನಾಡಿ, ವಿಶ್ವ ಪರಿಸರ ದಿನದಂದು ಔಷಧಿ ಸಸ್ಯಗಳನ್ನು ನೆಟ್ಟು ಬೆಳೆಸಿದರೆ ಪರಿಸರದ ಅವಿಭಾಜ್ಯ ಅಂಗವಾದ 'ಆರೋಗ್ಯ' ಸಂರಕ್ಷಣೆ ಮಾಡಿದಂತಾಗುವುದು. ಔಷಧಿ ಸಸ್ಯಗಳನ್ನು ಮನೆಯಲ್ಲಿರುವ ಕುಂಡಾಲಿಯಲ್ಲೂ ಬೆಳೆಸಬಹುದು. ಇಚ್ಛಿತರು ನಮ್ಮ ಕಾಲೇಜ ಔಷಧಿವನಕ್ಕೆ ಬಂದರೆ ಉಚಿತವಾಗಿ ಪೂರೈಸುತ್ತೇವೆ ಎಂದರು.

ಬಿಡದೇ ಸುರಿದ ಮಳೆಗೆ ರಸ್ತೆಯಲ್ಲಿ ಹರಿದ ಚರಂಡಿ ನೀರು | ಕೆರೆಯಂತಾದ ಶಾಲೆಯ ಆವರಣ

# ಅವಾಂತರ ಸೃಷ್ಟಿಸಿದ ಮಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಾಯುಭಾರ ಕುಸಿತದ ಪ್ರಭಾವದಿಂದ ಕಳೆದ 3–4 ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಜಿಟಿಜಿಟಿ ಮಳೆಗೆ ಪಟ್ಟಣ ಸೇರಿ ತಾಲೂಕಿನಾದ್ಯಂತ ಸಾಕಷ್ಟು ಸಮಸ್ಯೆ ಎದುರಾಗಿದೆ. ಬಾಲೇಹೊಸೂರು ಗ್ರಾಮದಲ್ಲಿ ಕಳೆದ ಮೂರು ದಿನಗಳಿಂದ ಸುರಿಯುತ್ತಿರುವ ಮಳೆಯ ಅರ್ಭಟಕ್ಕೆ ಚರಂಡಿ ನೀರು ರಸ್ತೆಯಲ್ಲಿ ತುಂಬಿಕೊಂಡಿದ್ದು, ಶಾಲೆಯ ಆವರಣಕ್ಕೆ ಅಪಾರ ಪ್ರಮಾಣದಲ್ಲಿ ನೀರು ನುಗ್ಗಿ ಮಕ್ಕಳಿಗೆ ಸಮಸ್ಯೆ ಉಂಟಾಗಿದೆ.



ಬಾಲೇಹೊಸೂರು ಗ್ರಾಮದಲ್ಲಿ ಮೂರು ದಿನಗಳಿಂದ ಜೋರಾದ ಮಳೆ ಸುರಿದಿದ್ದು, ಜಮೀನಿಗಳಲ್ಲಿ ನೀರು ನಿಂತು ಮುಂಗಾರು ಕೃಷಿ ಚಟುವಟಿಕೆಗಳಿಗೆ ಅವಕಾಶ ದೊರೆಯದಂತಾಗಿದೆ. ಅನೇಕ ಕಡೆಗಳಲ್ಲಿ ರೈತರು ಸಂಗ್ರಹಿಸಿರುವ ಮೇವು ಹಾನಿಯಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಗುರುವಾರ ಸಂಜೆಯ ಮಳೆಯ ಅರ್ಭಟದಿಂದ ಗ್ರಾಮದ ಬಹುತೇಕ ರಸ್ತೆಗಳು ನೀರಿನಿಂದ ಆವೃತ್ತವಾಗಿದ್ದವು. ಚರಂಡಿಗಳು ತುಂಬಿಕೊಂಡು ನೀರು ಗ್ರಾಮದ ಶ್ರೀ ಗುರು ದಿಂಗಾಲೇಶ್ವರ ಸರಕಾರಿ ಪ್ರಾಥಮಿಕ ಶಾಲೆಯ ಆವರಣಕ್ಕೆ ನುಗ್ಗಿ ಆವರಣವು ಕೆರೆ ರೂಪವನ್ನು ತಾಳಿತ್ತು. ನೀರು ಶಾಲಾ ಆವರಣಕ್ಕೆ ನುಗ್ಗುವ ಕುರಿತು ಕಳೆದ ಎರಡು ಮೂರು ವರ್ಷಗಳಿಂದ ಗ್ರಾಪಂಗೆ ತಿಳಿಸಿದ್ದರೂ ಅದರ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ಭಾವನೆ ತಾಳಿದ್ದಾರೆ. ಸಂಬಂಧಪಟ್ಟವರು ಈ ಸಮಸ್ಯೆಯನ್ನು ಕೂಡಲೇ ಬಗೆಹರಿಸುವಂತೆ ಎಸ್‌ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು ಆಗ್ರಹಿಸಿದ್ದಾರೆ.

ಕಳೆದ 2–3 ದಿನಗಳಿಂದ ಸುರಿಯುತ್ತಿರುವ ಮಳೆಗೆ ಕೃಷಿ ಚಟುವಟಿಕೆ ಸ್ಥಗಿತಗೊಂಡಿವೆ. ಕೆಲವು ಕಡೆಗಳಲ್ಲಿ ಮಳೆ ಬಿಡುವು ನೀಡಿದ ಹಿನ್ನೆಲೆಯಲ್ಲಿ ಬಿತ್ತನೆ ಕಾರ್ಯ ಚುರುಕುಗೊಂಡಿವೆ. ಪಟ್ಟಣ ಸೇರಿದಂತೆ ಸುತ್ತಲಿನ ಶಿಗ್ಲಿ, ಬಾಲೆಹೊಸೂರ, ಯಳವತ್ತಿ, ಸೂರಣಗಿ, ಅಡರಕಟ್ಟಿ, ಪು.ಬಡ್ನಿ, ಬಟ್ಟೂರು, ರಾಮಗೇರಿ ಸೇರಿ ಗ್ರಾಮೀಣ ಪ್ರದೇಶಗಳಲ್ಲಿ ಮಳೆಯಾಗುತ್ತಿದ್ದು, ಸೇತುವೆ ಮೇಲೆ ನೀರು ರಭಸದಿಂದ ಹರಿಯುತ್ತಿದ್ದು, ಅಲ್ಲಲ್ಲಿ ರಸ್ತೆ ಸಂಪರ್ಕ ಕಡಿತಗೊಂಡಿದೆ. ಪು.ಬಡ್ನಿ ಗ್ರಾಮದಲ್ಲಿ ಮಳೆಯಿಂದಾದ ಅನಾಹುತವನ್ನು ಜಿಲ್ಲಾಧಿಕಾರಿಗಳು ವೀಕ್ಷಿಸಿ ಕ್ರಮಕ್ಕೆ ನಿರ್ದೇಶನ ನೀಡಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿನ ರಸ್ತೆಗಳಲ್ಲಿ ಕೊಳಚೆ ಪ್ರದೇಶಗಳಾಗಿ ಮಾರ್ಪಟ್ಟಿವೆ. ರಸ್ತೆಗಳು ತಗ್ಗುಗುಂಡಿಗಳು ಬಿದ್ದು ನೀರು ಕೆಸರಿನಿಂದ ಕೂಡಿವೆ. ಬಿತ್ತನೆಗೆ ಹೊಲಗಳಿಗೆ ತೆರಳಿದ್ದ ಟ್ರ್ಯಾಕ್ಟರ್, ಎತ್ತಿನ ಗಳೆ ಮನೆಗೆ ಮರಳಿ ಬರುತ್ತಿವೆ. ಶುಕ್ರವಾರ ಮುಂಜಾನೆ ಮೋಡ ಮುಸುಕಿದ ವಾತಾವರಣವಿದ್ದಾಗ ರೈತರು ಬಿತ್ತನೆ ಕಾರ್ಯವನ್ನು ಮುಗಿಸುವ ಯೋಚನೆಯಲ್ಲಿದ್ದರೂ, ಮದ್ಯಾಹ್ನದ ವೇಳೆಗೆ ಸುರಿದ ಮಳೆಯಿಂದ ಬಿತ್ತನೆ ಕಾರ್ಯ ಸ್ಥಗಿತಗೊಂಡಿದೆ.

ಬಾಲೇಹೊಸೂರು ಗ್ರಾಮದಲ್ಲಿ ನೀರು ಹರಿಯುವ ರಾಜ ಕಾಲುವೆ ನಿರ್ಮಾಣ ಮಾಡಲು ಅನುದಾನ ಮಂಜೂರಾಗಿದ್ದರೂ ಕಾಮಗಾರಿ ನಿಂತಿದೆ. ರಾಜಕಾಲುವೆ ನಿರ್ಮಾಣವಾದರೆ ನೀರು ಸರಿಯಾದ ರೀತಿಯಲ್ಲಿ ಹರಿದು ಹೋಗುವಂತಾಗುತ್ತದೆ. ರಾಜಕಾಲುವೆ ನಿರ್ಮಾಣಕ್ಕೆ ಉಂಟಾಗಿರುವ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆ ದಿಟ್ಟ ನಿರ್ಧಾರ ತೆಗೆದುಕೊಂಡು ಮಳೆಗಾಲದಲ್ಲಿ ಗ್ರಾಮಸ್ಥರು ಅನುಭವಿಸುವ ತೊಂದರೆಯನ್ನು ತಪ್ಪಿಸಬೇಕೆಂದು ಗ್ರಾಪಂ ಮಾಜಿ ಸದಸ್ಯ ಫಕ್ಕೀರೇಶ ಮ್ಯಾಟಣ್ಣವರ ಆಗ್ರಹಿದ ದ್ದಾರೆ.



ನೀಟ್ ಫಲಿತಾಂಶದ ಕುರಿತು ಅಚ್ಚರಿ ವ್ಯಕ್ತಪಡಿಸಿದ ಸಿಎಂ ಸಿದ್ದರಾಮಯ್ಯ

## ಇಷ್ಟೊಂದು ಜನ ಶೇ.100 ಅಂಕ ಗಳಿಸುವುದು ಅಸಾಧ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹರಿಯಾಣದ 67 ಅಭ್ಯರ್ಥಿಗಳಿಗೆ 720ಕ್ಕೆ 720 ಅಂಕ ಗಳಿಸಿರುವ ಕುರಿತು ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ವಿರೋಧ ವ್ಯಕ್ತಪಡಿಸಿದ ನಂತರ, ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ಫಲಿತಾಂಶದ ಬಗ್ಗೆ ಆಶ್ಚರ್ಯ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ತಮ್ಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, "ನೀಟ್ ಫಲಿತಾಂಶದಲ್ಲಿ ಭಾರಿ ಅಕ್ರಮದ ನಡೆದಿರಬಹುದಾದ ಶಂಕೆ ದೇಶಾದ್ಯಂತ ವ್ಯಕ್ತವಾಗುತ್ತಿದ್ದು, ಪರೀಕ್ಷೆ ಬರೆದಿರುವ 24 ಲಕ್ಷ ಯುವಜನರು, ಅವರ ಪೋಷಕರಲ್ಲಿ ಮೂಡಿರುವ ಆತಂಕಕ್ಕೆ, ಪರೀಕ್ಷೆಯ ವಿಶ್ವಾಸಾರ್ಹತೆ ಬಗ್ಗೆ ಎದ್ದಿರುವ ಪ್ರಶ್ನೆಗಳಿಗೆ ಎನ್‌ಟಿಎ ಆಗಲಿ, ಕೇಂದ್ರದ ನರೇಂದ್ರ ಮೋದಿಯವರ ಸರ್ಕಾರವಾಗಲೀ ಉತ್ತರಿಸದೆ ಲಕ್ಷಾಂತರ ಯುವಜನರ ಭವಿಷ್ಯವನ್ನು ಮಣ್ಣುಪಾಲು ಮಾಡಲು ಹೊರಟಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ನೀಟ್ (NEET) ಪರೀಕ್ಷೆಯಲ್ಲಿ 67 ಅಭ್ಯರ್ಥಿಗಳಿಗೆ 720ಕ್ಕೆ 720 ಅಂಕಗಳು ಬಂದಿವೆ. ಅಂದರೆ 100% ಅಂಕಗಳು ಬಂದಿದೆ. ಆದರೆ, ಈ ಹಿಂದೆ ಬಂದ ಟಾಪರ್‌ಗಳ ಸಂಖ್ಯೆ ಎಷ್ಟು? ಎಂಬುದನ್ನು ಹೋಲಿಕೆ ಮಾಡಿ ನೋಡಿದರೆ ಈ ಬಾರಿಯ ಫಲಿತಾಂಶದಲ್ಲಿ ಅಕ್ರಮದ ವಾಸನೆ ಬಡಿಯುತ್ತದೆ. 2019ರಲ್ಲಿ ಒಬ್ಬ ವಿದ್ಯಾರ್ಥಿ, 2020ರಲ್ಲಿ ಒಬ್ಬ, 2021ರಲ್ಲಿ ಮೂವರು, 2022ರಲ್ಲಿ ಒಬ್ಬ, 2023ರಲ್ಲಿ ಇಬ್ಬರು ವಿದ್ಯಾರ್ಥಿಗಳು ನೂರಕ್ಕೆ ನೂರು ಪ್ರತಿಶತ ಅಂಕ ಪಡೆದಿದ್ದರೆ ಈ ವರ್ಷ 67 ವಿದ್ಯಾರ್ಥಿಗಳು ಟಾಪರ್‌ಗಳಾಗಿ ಹೊರಹೊಮ್ಮಿದ್ದಾರೆ" ಎಂದು ವಿವರಿಸಿದ್ದಾರೆ.

## ಬೊಮ್ಮಾಯಿ ಗೆಲುವಿಗೆ ಶ್ರಮಿಸಿದ ಕಾರ್ಯಕರ್ತರಿಗೆ ರಾಜು ಕುರುಡಗಿ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಗದಗ



ಬಸವರಾಜ ಬೊಮ್ಮಾಯಿ ಹಾಗೂ ಪಿ.ಸಿ. ಗದ್ದಿಗೌಡ್ರ ಅವರ ಗೆಲುವಿಗೆ ಶ್ರಮಿಸಿದ ಎಲ್ಲಾ ಕಾರ್ಯಕರ್ತರಿಗೆ, ಮತಬಾಂಧವರಿಗೆ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಅಭಿನಂದನೆಗಳನ್ನು ತಿಳಿಸಿದ್ದಾರೆ.

ಕ್ಷೇತ್ರಗಳಲ್ಲಿ ಮತಾಶೀರ್ವಾದದ ಮೂಲಕ ಬೆಂಬಲಿಸಿರುವ ಸಮಸ್ತ ಹಾವೇರಿ–ಗದಗ ಹಾಗೂ ಬಾಗಲಕೋಟೆ ಜಿಲ್ಲೆಯ ಮತದಾರರಿಗೆ ಧನ್ಯವಾದಗಳು. ವಿಶೇಷವಾಗಿ ಗದಗ ನಗರದ ಬಿಜೆಪಿಯ ಚುನಾಯಿತ ಅಭ್ಯರ್ಥಿಗಳು, ಬಿಜೆಪಿಯ ಮೋರ್ಚಾ, ಮಂಡಲ, ಬೂತ್ ಅಧ್ಯಕ್ಷರು ಹಾಗೂ ಕಾರ್ಯಕರ್ತರು ಚುನಾವಣೆಯಲ್ಲಿ ಶ್ರಮ ವಹಿಸಿ ನಮ್ಮ ಅಭ್ಯರ್ಥಿಯನ್ನು ವಿಜಯಶಾಲಿಯಾಗುವುದರಲ್ಲಿ ನೇರವಾಗಿ ಅಥವಾ ಪರೋಕ್ಷವಾಗಿ ಮುಖ್ಯ ಪಾತ್ರ ವಹಿಸಿದ್ದಾರೆ.

ಲೋಕಸಭಾ ಚುನಾವಣೆಯಲ್ಲಿ ಗದಗ ನಗರದಲ್ಲಿ ಪಕ್ಷದ ಸಂಘಟನೆಗೆ ಬೆನ್ನೆಲುಬಾಗಿ ನಿಂತು ಕಾರ್ಯಕರ್ತರಿಗೆ ಹುಮ್ಮಸ್ಸು ತುಂಬಿರುವ ನರಗುಂದ ಶಾಸಕ ಸಿ.ಸಿ. ಪಾಟೀಲ, ಲೋಕಸಭಾ ಸಂಚಾಲಕ ಕಳಕಪ್ಪ ಬಂಡಿ, ವಿ.ಪ. ಸದಸ್ಯ ಎಸ್.ವ್ಹಿ. ಸಂಕನೂರ, ಶಿರಹಟ್ಟಿ ಶಾಸಕ ಚಂದ್ರು ಲಮಾಣಿ, ಬಿಜೆಪಿ ಮುಖಂಡರಾದ ಅನಿಲ ಮೆಣಸಿನಕಾಯಿ ಸೇರಿದಂತೆ ಬಿಜೆಪಿಯ ಎಲ್ಲ ಮುಖಂಡರು, ಕಾರ್ಯಕರ್ತರು, ಜೆಡಿಎಸ್ ಪಕ್ಷದ ಸರ್ವ ಮುಖಂಡರು, ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಪಕ್ಷಗಳ ಎಲ್ಲ ಹಿರಿಯರು ಮಾರ್ಗದರ್ಶನ ಪರಿಶ್ರಮದಿಂದ ಬಿಜೆಪಿ ವಿಜಯಶಾಲಿಯಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೂತನ ಜಿಲ್ಲಾ ಪ್ರಭಾರಿ ಗಿರಿಯಪ್ಪ ಮಡಿವಾಳರರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ




ಗದಗ ಜಿಲ್ಲಾ ಪತಂಜಲಿ ಯೋಗ ಸಮಿತಿಯ ನೂತನ ಜಿಲ್ಲಾಪ್ರಭಾರಿಗಳಾಗಿ ಅಧಿಕಾರ ವಹಿಸಿಕೊಂಡ ಗಿರಿಯಪ್ಪ ಮಡಿವಾಳರ ಇವರಿಗೆ ಜಿಲ್ಲಾ ಪತಂಜಲಿ ಯೋಗ ಸಮಿತಿ, ಭಾರತ ಸ್ವಾಭಿಮಾನ ಟ್ರಸ್ಟ್, ಮಹಿಳಾ ಪತಂಜಲಿ ಯೋಗ ಸಮಿತಿ, ಕಿಸಾನ ಪಂಚಾಯತ, ಯುವ ಭಾರತ ಸಂಘಟನೆಗಳ ಪರವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಮುನಸಿಪಲ್ ಮೈದಾನದ ವಾಯು ವಿಹಾರ ಸಂಘದ ಅಧ್ಯಕ್ಷರು ಸಂಘದ ಪರವಾಗಿ ಹಾಗೂ ನಗರಸಭಾ ಮಾಜಿ ಸದಸ್ಯ ಅಕ್ಕಿಯವರು ಸನ್ಮಾನಿಸಿ ಗೌರವಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಗಿರಿಯಪ್ಪ ಮಡಿವಾಳರ, ಯೋಗ ಹಾಗೂ ಆಯುರ್ವೇದಕ್ಕೆ ನನ್ನ ಶಕ್ತಿ ಮೀರಿ ಸೇವೆ ಕೊಡಲು, ಮನೆ ಮನೆಗೆ ಯೋಗ ಮುಟ್ಟಿಸುವ ಉದ್ದೇಶದಿಂದ ಹೊಸ ಕಕ್ಷೆಗಳನ್ನು ಪ್ರಾರಂಭಿಸುವುದು ಹಾಗೂ ಅವುಗಳು ನಿರಂತರವಾಗಿ ನಡೆಯುವಂತೆ ಮುತುವರ್ಜಿವಹಿಸುವುದು ನನ್ನ ಜವಾಬ್ದಾರಿಯಾಗಿದೆಎಂದರು.

ಅಧ್ಯಕ್ಷತೆ ವಹಿಸಿದ್ದ ಭಾರತ ಸ್ವಾಭಿಮಾನ ಟ್ರಸ್ಟ್‌ನ ಜಿಲ್ಲಾ ಪ್ರಭಾರಿ ರುದ್ರಣ್ಣ ಗುಳಗುಳೆ ಮಾತನಾಡಿ, ನಾವು ಪ್ರತಿ ದಿನ ಯೋಗಕ್ಕೆ ಬರುವುದು ನಮ್ಮ ಆರೋಗ್ಯಕ್ಕಾಗಿ, ಆದರೆ ಯೋಗದಲ್ಲಿ ಸೇವೆ ಕೊಡುವುದರಿಂದ ಸಮಾಜ ಸ್ವಾಸ್ಥ್ಯ ಹಾಗೂ ರಾಷ್ಟ್ರದ ಸ್ವಾಸ್ಥ್ಯ ವೃದ್ಧಿಸಿ ಸದೃಢ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ನಾವು ನಮಗೆ ಗೊತ್ತಾಗದ ಹಾಗೆ ಸೇವೆಯನ್ನು ಕೊಡುವುದರಲ್ಲಿ ಸಂದೇಹವೇ ಇಲ್ಲ ಎಂದರು.

ರಾಷ್ಟ್ರಪ್ರಶಸ್ತಿ ವಿಜೇತ ಶಿಕ್ಷಕ ಎಸ್. ಎನ್. ಬಳ್ಳಾರಿ, ಸಂತೋಜಿಯವರು ಮಾತನಾಡಿದರು. ವೇದಿಕೆಯ ಮೇಲೆ ಸಮಿತಿಯ ಜಿಲ್ಲಾ ಖಜಾಂಚಿ ಕೆ.ಎಸ್. ಗುಗ್ಗರಿ ಉಪಸ್ಥಿತರಿದ್ದರು. ಸಹಪ್ರಭಾರಿ ಆಂಜನೇಶ ಮಾನೆ ಸ್ವಾಗತಿಸಿದರು. ಮಹಿಳಾ ಕಾರ್ಯದರ್ಶಿ ನಾಗರತ್ನಾ ಬಡಿಗಣ್ಣವರ ನಿರೂಪಿಸಿದರು. ಮಹಿಳಾ ಜಿಲ್ಲಾ ಪ್ರಭಾರಿ ಶೋಭಾ ಗುಗ್ಗರಿ ವಂದಿಸಿದರು.

## ಕಾರ್ಮಿಕ ಕಲ್ಯಾಣ ಸಂಸ್ಥೆ ವತಿಯಿಂದ ಸಾಧಕರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕ ಕಲ್ಯಾಣ ಸಂಸ್ಥೆ ವತಿಯಿಂದ ದಾಸರ ಓಣಿಯ ಶಾಂತಾರಾಮ ಸಮುದಾಯ ಭವನದಲ್ಲಿ ಕಾರ್ಮಿಕರ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭವನ್ನು ಯುವ ನಾಯಕ ಕೃಷ್ಣಗೌಡ ಎಚ್.ಪಾಟೀಲ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಪ್ರಶಸ್ತಿ ಪುರಸ್ಕೃತ ಪರ್ತಕರ್ತರಾದ ವೆಂಕಟೇಶ ಇಮರಾಪೂರ, ಮಾಳಿಂಗರಾಯ ಪೂಜಾರ, ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಪ್ರಾಧಿಕಾರದ ನಿರ್ದೇಶಕ ಬಸವರಾಜ ಕಡೇಮನಿ, ಎಸ್‌ಎಸ್‌ಎಲ್‌ಸಿಯಲ್ಲಿ ಗದಗ ಜಿಲ್ಲೆಗೆ ಪ್ರಥಮ ರ್‍ಯಾಂಕ್ ಪಡೆದ ವಿದ್ಯಾರ್ಥಿನಿ ಸಮೃದ್ಧಿ ಶ್ರೀಧರ ಶಿದ್ಲಿಂಗ ಹಾಗೂ ಇತರೆ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ವೇದಿಕೆಯ ಮೇಲೆ ಕಾರ್ಮಿಕ ಕಲ್ಯಾಣ ಸಂಸ್ಥೆಯ ಅಧ್ಯಕ್ಷ ಮೊಹಮ್ಮದ ಇರ್ಫಾನ ಡಂಬಳ, ಉಪಾಧ್ಯಕ್ಷ ಶಂಕರಗೌಡ ಭರಮಗೌಡರ, ಗೌರವಾಧ್ಯಕ್ಷ ಝುಡ್.ಡಿ. ಬೇಲೇರಿ, ಸಾಮಾಜಿಕ ಕಾರ್ಯಕರ್ತರಾದ ಗೀತಾ ಹಬೀಬ, ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾಸಂಘದ ಅಧ್ಯಕ್ಷ ಮೆಹಬೂಬಖಾನ ಪಠಾಣ, ಹಿರಿಯರಾದ ಬಿ.ಎಚ್. ಪೂಜಾರ, ಬಾಪುಗೌಡ ಕರಿಸೋಮನಗೌಡ್ರ, ಚನ್ನವೀರಗೌಡ ಪಾಟೀಲ, ಮಹಮ್ಮದ ಯೂಸೂಫ ಬೇಪಾರಿ, ಕೆ.ಬಿ. ಕುಡಗುಂಟಿ, ಈಶ್ವರಪ್ಪ ಬಳ್ಳಾರಿ ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಉಮರಫಾರುಕ ಹುಬ್ಬಳ್ಳಿ, ಅಲ್ಲಾಭಕ್ಷ ದೊಡ್ಡಮನಿ, ಇಬ್ರಾಹಿಂ ಹಳ್ಳಿಕೇರಿ, ನೂರಅಹ್ಮದ ಬಳ್ಳಾರಿ, ರಮೇಶ ಬಿಳೆಯಲಿ, ಗೌಸ ಬಳ್ಳಾರಿ, ರಫೀಕ ಧಾರವಾಡ, ಪ್ರವೀಣ ಹಾದಿಮನಿ, ಇಸ್ಮಾಯಿಲ್ ರೋಣದ, ಮೈನು ಗುಜಮಾಗಡಿ, ಸಿದ್ದು ಹಾದಿಮನಿ, ಲಿಯಾಖತ್ ಮುಲ್ಲಾ, ಇಮಾಮಸಾಬ ಕದಡಿ, ಮೋತಿಲಾಲ ಮಾಳಗಿಮನಿ, ಶಫಿ ಶಿದ್ದಿ, ಮೌಲಸಾಬ ಸದರಬಾಯಿ, ಚಾಂದಸಾಬ ಅಬ್ಬಿಗೇರಿ, ಖಾಜಾಸಾಬ ಗೋನಾಳ, ನೂರಅಹ್ಮದ ಶಿರಹಟ್ಟಿ, ಅಷ್ಫಾಕ ಕೊಪ್ಪಳ, ಬಸೀರ ಬಳ್ಳಾರಿ, ಮಂಜುನಾಥ ದುಂಡಸಿ, ಜಾವೇದ ಹೈದರ, ಖಾಜಾಸಾಬ ಗಬ್ಬೂರ, ಅನಿಲ ಜಾಧವ, ಮೆಹಬೂಬಸಾಬ ಮುಲ್ಲಾ, ದುರಗಪ್ಪ ಗುಡಿಮನಿ, ಜಾಕೀರ ಕಲಬುರ್ಗಿ, ಕಾರ್ಪೆಂಟರ ಶಿದ್ದಪ್ಪ, ಮುನ್ನಾ ಬೆಟಗೇರಿ, ಬಸವರಾಜ ಅರಮನಿ ಹಾಗೂ ಗದಗ ಜಿಲ್ಲೆಯ ಸಮಸ್ತ ಕಟ್ಟಡ ಕಾರ್ಮಿಕರು, ವಿದ್ಯಾರ್ಥಿಗಳ ಪಾಲಕರು ಹಾಜರಿದ್ದರು. ಝುಡ್.ಡಿ. ಬೇಲೇರಿ ಸ್ವಾಗತಿಸಿದರು. ನಾಶೀರ ಚಿಕೇನಕೊಪ್ಪ ನಿರೂಪಿಸಿದರು. ನಿಂಗಪ್ಪ ಕಟ್ಟಿಮನಿ ವಂದಿಸಿದರು.

## ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆ



■ವಿಜಯಸಾಕ್ಷಿ ಸುದ್ದಿ, ನರೇಗಲ್

ನಾವು ವಾಸಿಸುವ ಮನೆ ಹಾಗೂ ಕಲಿಯುವ ಶಾಲೆಯ ಸುತ್ತಮುತ್ತಲಿನ ವಾತಾವರಣವನ್ನು ಸ್ವಚ್ಛವಾಗಿರಿಸಿಕೊಳ್ಳಬೇಕು. ಪರಿಸರ ಸಂರಕ್ಷಣೆ ಮಾಡಿದರೆ ಪರಿಸರ ನಮ್ಮನ್ನು ರಕ್ಷಣೆ ಮಾಡುತ್ತದೆ ಎಂದು ಮುಖ್ಯಶಿಕ್ಷಕ ಎಂ.ಬಿ. ಸಜ್ಜನರ ಹೇಳಿದರು.

ಪಟ್ಟಣದ ಅನ್ನದಾನ ವಿಜಯ ಪ್ರೌಢಶಾಲೆಯಲ್ಲಿ ಆಚರಿಸಲಾದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಸ, ತ್ಯಾಜ್ಯ ನೀರು ಇವುಗಳಿಂದ ವಾತಾವರಣವು ಮಲಿನವಾಗುತ್ತದೆ. ಅದಕ್ಕಾಗಿ ಸರ್ಕಾರ ಹಸಿ ಕಸ, ಒಣ ಕಸ ವಿಂಗಡಿಸಿ ನಿಮ್ಮ ಮನೆಯ ಮುಂದೆ ಬರುವ ವಾಹದಲ್ಲಿ ಹಾಕಲು ಅನುಕೂಲ ಮಾಡಿದೆ. ನಿಮ್ಮ ಮನೆಯ ಪರಿಸರ ಸ್ವಚ್ಛವಾಗಿದ್ದರೆ ಊರೆಲ್ಲ ಸ್ವಚ್ಛವಾಗಿರುತ್ತದೆ. ಗಿಡಗಳನ್ನು ಬೆಳೆಸಲು ಪ್ರಯತ್ನ ಪಡಬೇಕು. ಗಿಡಗಳನ್ನು ಬೆಳೆಸಿ ಉಳಿಸಿಕೊಳ್ಳದಿದ್ದರೆ ಮುಂದೊಂದು ದಿನ ಆಮ್ಲಜನಕ ಇಲ್ಲದಂತಾಗಿ ಪ್ರಾಣಾಪಾಯಕ್ಕೆ ಗುರಿಯಾಗುತ್ತೇವೆ. ಅದಕ್ಕಾಗಿ ಪರಿಸರ ಸಂರಕ್ಷಣೆಗೆ ನಾವೆಲ್ಲರೂ ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ಎ.ಎಂ. ರಾಠೋಡ್, ಎಂ.ವಿ. ವಿರಾಪೂರ, ಎಂ.ವಿ. ಬಿಂಗಿ, ಎಲ್.ಎನ್. ನಾಯಕ್, ಎಸ್.ಕೆ. ಗಾಣಿಗೇರ, ಆರ್. ಎಂ. ಸಿಳ್ಳಿನ್, ಟಿ.ಬಿ. ಆಡೂರ, ಎಸ್.ಬಿ. ಬೂದಿಹಾಳ, ಐ.ಎಂ. ಆರಿ, ಎನ್.ವಿ. ಕೊಡಿಕೊಪ್ಪಮಠ, ಎಸ್.ಕೆ. ನಿಡಶೇಶಿ, ಬಿ.ವೈ. ಅಬ್ಬಿಗೇರಿ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

ರೇಣುಕಾಚಾರ್ಯ ಪ್ರಾಥಮಿಕ ಶಾಲೆಯಲ್ಲಿ: ಪಟ್ಟಣದ ಪಂಚಾಚಾರ್ಯ ಗ್ರಾಮಿಣಾಭಿವೃದ್ಧಿ ಶಿಕ್ಷಣ ಸಂಸ್ಥೆಯ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಡಾ. ಆರ್.ಕೆ. ಗಚ್ಚಿನಮಠ, ಈಶ್ವರ ಬೆಟಗೇರಿ, ಮುಖ್ಯ ಶಿಕ್ಷಕಿ ನಿರ್ಮಲಾ ಹಿರೇಮಠ, ವಿಜಯಲಕ್ಷ್ಮೀ ಬಿಂಗಿ, ಈಶ್ವರ ಆದಿ, ಜ್ಯೋತಿ ಗಂಗರಗೊಂಡ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

## ಸರ್ಕಾರಗಳ ವೈಫಲ್ಯ ಖಂಡಿಸಿ ಮನವಿ ಸಲ್ಲಿಕೆ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ




ಪಟ್ಟಣದಲ್ಲಿ ತಾಲ್ಲೂಕಾ ಸಾರ್ವಜನಿಕ ಹೋರಾಟ ವೇದಿಕೆ ಮತ್ತು ಅದ್ವಿಕ್ ವಿವಿಧೋದ್ದೇಶಗಳ ಅಭಿವೃದ್ಧಿ ಸಂಘದ ಆಶ್ರಯದಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ವೈಫಲ್ಯವನ್ನು ಖಂಡಿಸಿ ಶುಕ್ರವಾರ ತಹಸೀಲ್ದಾರ್ ಮುಖಾಂತರ ರಾಷ್ಟ್ರಪತಿಗಳಿಗೆ ಮನವಿ ಪತ್ರ ಸಲ್ಲಿಸಿದರು.ಅದ್ವಿಕ್ ವಿವಿಧೋದ್ದೇಶಗಳ ಅಭಿವೃದ್ಧಿ ಸಂಘದ ಅಧ್ಯಕ್ಷ ಬಸವರಾಜ ನವಲಗುಂದ ಅಸಹಕಾರ ಚಳುವಳಿಗೆ ಚಾಲನೆ ನೀಡಿದ ಮಾತನಾಡಿ, ಸಾರ್ವಜನಿಕರ ವಿವಿಧ ಬೇಡಿಕೆಗಳಿಗನ್ನು ಈಡೇರಿಸುವಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ವಿಫಲವಾಗಿವೆ. ಅವರ ಜನ ವಿರೋಧಿ ನೀತಿಯನ್ನು ಖಂಡಿಸಿ ಅಸಹಕಾರ ಚಳವಳಿ–ಜನ ಕಲ್ಯಾಣ ಯಾತ್ರೆಯನ್ನು ಮುಂಡರಗಿಯಿಂದ ಕಾಶಿ–ಗಯಾ–ಅಯೋಧ್ಯೆಗೆ ಪ್ರಾರಂಭಿಸುತ್ತಿದ್ದೇವೆ ಎಂದರು. ವಿವಿಧ ಬೇಡಿಕೆಗಳಾದ ಗದಗ–ಹರಪನಹಳ್ಳಿ ರೈಲ್ವೆ ಮಾರ್ಗ, ಕೊಪ್ಪಳ–ಮುಂಡರಗಿ–ಶಿಗ್ಗಾಂವಿ ರಾಷ್ಟ್ರೀಯ ಹೆದ್ದಾರಿ, ಪ್ರಧಾನ ಮಂತ್ರಿ ವಸತಿ ಆವಾಸ ಯೋಜನೆ, ಬಗರ್ ಹುಕುಂ ಹಕ್ಕು ಪತ್ರ, ಕಾಯ್ದೆ 1978 ಪುನರ್ ಸ್ಥಾಪನೆ ಇತ್ಯಾದಿ ಬೇಡಿಕೆಗಳಿಗೆ ಆಗ್ರಹಿಸಿ ಯಾತ್ರಾ ಚಳುವಳಿಯನ್ನು ಪ್ರಾರಂಭಿಸಿದ್ದೇವೆ. ಈ ಬೇಡಿಕೆಗಳನ್ನು ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ನಿರಂತರ ಧರಣಿ ಸತ್ಯಾಗ್ರಹ ಪ್ರಾರಂಭಿಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸುಭಾಷ ಕುಂಬಾರ, ಮಂಜುನಾಥ ಹುಬ್ಬಳ್ಳಿ, ನಿಂಗಪ್ಪ ಚಿಲವಾಡಗಿ, ಯಲ್ಲಪ್ಪ ಹೊಂಬಳಗಟ್ಟಿ, ಬಸಪ್ಪ ತಿಮ್ಮಪ್ಪ ವಡ್ಡರ, ಹನುಮಂತ ಮಾದರ, ಹನುಮವ್ವ ಬಾಗಲಿ, ರವೀಂದ್ರ ಸುಕ್ಕಪ್ಪನವರ, ಹನುಮಂತಪ್ಪ ಗುತ್ತಣ್ಣವರ, ಮಲ್ಲಪ್ಪ ಪಾದಗಟ್ಟಿ, ಪ್ರಜ್ವಲ್ ದೊಡ್ಡಮನಿ, ಈರವ್ವ ಪಾದಗಟ್ಟಿ, ಮಂಜುನಾಥ ಮಾದರ, ಲಕ್ಷ್ಮವ್ವ ಮಾದರ, ಹನುಮಂತಪ್ಪ ಬಾಗಲಿ, ಷಣ್ಮುಖಪ್ಪ ಹಳ್ಳಿಕೇರಿ, ಮುತ್ತವ್ವ ಚಳ್ಳಮಾದರ, ಮ್ಯಾಗೇರಿ ರಂಜಿ, ಬರಮಪ್ಪ ಹರಿಜನ, ಮ್ಯಾಗೇರಿ ಅನ್ನಕ್ಕ, ಲಕ್ಷ್ಮವ್ವ ಹಲಗಿ, ವಿನಾಯಕ ದೊಡ್ಡಮನಿ, ಲಕ್ಷ್ಮವ್ವ ಕುಂಬಾರ, ಮುತ್ತಪ್ಪ ಕುಂಬಾರ, ಆನಂದ ಹೊಸಕುರುಬರ, ನೇತ್ರ ಬರಮಗೌಡ್ರ, ರೇಖಾ ಹಿರೆಹಂಚಿನಾಳ, ಹನುಮಂತ ಶೋಭಾ ಚಂದ್ರಗೌಡ ಪೊಲೀಸ್‌ಪಾಟೀಲ ಉಪಸ್ಥಿತರಿದ್ದರು.

## ಲೋಕಾಯುಕ್ತ ಜನ ಸಂಪರ್ಕ ಸಭೆ, ಸಾರ್ವಜನಿಕರಿಂದ ಅಹವಾಲು ಸ್ವೀಕಾರ

■ವಿಜಯಸಾಕ್ಷಿ ಸುದ್ದಿ, ಗದಗ

ನಿಬಂಧಕರು ಹಾಗೂ ಅಪರ ಪೊಲೀಸ್ ಮಹಾ ನಿರ್ದೇಶಕರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಅವರ ನಿರ್ದೇಶನದಂತೆ ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಗದಗ ಜಿಲ್ಲೆಗೆ ಭೇಟಿ ನೀಡುತ್ತಿರುವ ಸಂಬಂಧ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಜೂನ್ 12ರ ಬುಧವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 01.00 ಗಂಟೆಯವರೆಗೆ ಎ.ಸಿ ಕಚೇರಿಯ ಸಭಾಂಗಣದ ಗದಗದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಕರ್ನಾಟಕ ಲೋಕಾಯುಕ್ತ ಕಚೇರಿಯ ಪ್ರಕಟಣೆ ತಿಳಿಸಿದೆ.

'ಇಂಜಿನಿಯರಿಂಗ್ ಮ್ಯಾನೇಜಮೆಂಟ್:ಎಂಟ್ರಪ್ರೆನ್ಯುರಶಿಪ್' ಪುಸ್ತಕ ಬಿಡುಗಡೆ

## ವಿದ್ಯಾರ್ಥಿಗಳಿಗೆ ಮಾರ್ಗದರ್ಶಿ ಪುಸ್ತಕ

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ವಿಶ್ವ ಪುಸ್ತಕ ದಿನಾಚರಣೆಯಲ್ಲಿ ಎಲೆಕ್ಟ್ರಿಕಲ್ ವಿಭಾಗದ ಮುಖ್ಯಸ್ಥ ಡಾ. ಈರಣ್ಣ ಕೋರಚಗಾಂವ ರಚಿಸಿದ 'ಇಂಜಿನಿಯರಿಂಗ್ ಮ್ಯಾನೇಜಮೆಂಟ್ ಮತ್ತು ಎಂಟ್ರಪ್ರೆನ್ಯುರಶಿಪ್' ಪುಸ್ತಕವನ್ನು ತೋಂಟದಾರ್ಯ ಸಂಸ್ಥೆಯ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿ ಬಿಡುಗಡೆ ಮಾಡಿದರು.

ಕಾಲೇಜಿನ ಪ್ರಿನ್ಸಿಪಾಲ್ ಡಾ. ಎಂ.ಎಂ. ಅವಟಿ ಪುಸ್ತಕ ಪ್ರಕಟಣೆಯ ಬಗ್ಗೆ ಸಂತೋಷ ವ್ಯಕ್ತ ಪಡಿಸುತ್ತಾ, ಕಾಲೇಜಿನ ಎಲ್ಲಾ ಶಿಕ್ಷಕರು ಕೂಡ ತಮ್ಮ ತಮ್ಮ ಅನುಭವದ ಪರಿಧಿಯಲ್ಲಿ ಪುಸ್ತಕಗಳನ್ನು ಪ್ರಕಟನೆ ಮಾಡಲಿ. ಇದರಿಂದ ವಿದ್ಯಾರ್ಥಿಗಳಿಗೆ ತಿಳುವಳಿಕೆ ಮತ್ತು ಅನುಭವ ಬೆಳೆಯುತ್ತದೆ ಎಂದರು. ಪುಸ್ತಕದ ಲೇಖಕರಾದ ಡಾ. ಈರಣ್ಣ ಕೋರಚಗಾಂವ ಮಾತನಾಡುತ್ತಾ, ಈ ಪುಸ್ತಕದಲ್ಲಿ ಸುಲಭ ರೀತಿಯಲ್ಲಿ ವಿಷಯ ಪ್ರಸ್ತಾವನೆ ಮತ್ತು ನಿರೂಪಣೆ ಮಾಡಲಾಗಿದ್ದು, ಪ್ರಶ್ನೆಗಳಿಗೆ ಖಚಿತ ಉತ್ತರ ಬರೆಯುವ ಮಾದರಿಯನ್ನು ಸಹ ತಿಳಿಸಲಾಗಿದೆ. ವಿದ್ಯಾರ್ಥಿಗಳಿಗೆ ಈ ಪುಸ್ತಕ ತಮ್ಮ ಜೀವನ ಪರ್ಯಂತ ಮಾರ್ಗದರ್ಶಿಯಾಗಲಿದೆ. ಈ ಪುಸ್ತಕಗಳು ಅಮೇಝಾನ್, ಫ್ಲಿಪ್‌ಕಾರ್ಟ್ ಮುಂತಾದ ಆನ್‌ಲೈನ್ ಸ್ಟೋರ್ಸ್‌ನಲ್ಲಿ ಲಭ್ಯ ಎಂದು ಹೇಳಿದರು.

ಪ್ರೊ. ಜಗದೀಶ ಶಿವನಗುತ್ತಿ ಮತ್ತು ಪ್ರೊ. ಸಂತೋಷಕುಮಾರ್ ಜಿ.ಎಂ ವಿಶ್ವ ಪುಸ್ತಕ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳೊಂದಿಗೆ ಜಾಥಾ ನಡೆಸಿದರು. ಪ್ರೊ. ಮಲ್ಲಿಕಾರ್ಜುನ ಜಿ.ಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಪ್ರೊ. ಗೌತಮ ರೇವಣಕರ, ಪ್ರೊ. ದಯಾನಂದ ಗೌಡರ, ಪ್ರೊ. ಲೋಕೇಶ, ಪ್ರೊ. ಅಶ್ವಿನಿ ಅರಳಿ, ಪ್ರೊ. ಮಧುಸೂಧನ ಕುಲಕರ್ಣಿ, ಪ್ರೊ. ಶೈಲಜಾ ಮುದೇನಗುಡಿ, ಪ್ರೊ. ತೆಹಸಿನ್ ಶಿಗ್ಲಿ, ಪ್ರೊ. ಪ್ರಸನ್ನ ನಾಡಗೌಡ, ಪ್ರೊ. ಸುನಿಲ ಪಾಟೀಲ್, ಪ್ರೊ. ವೀರೇಶ ಮಾಗಳದ, ಪ್ರೊ. ವಿಜಯಕುಮಾರ ಮಾಲಗಿತ್ತಿ, ಪ್ರೊ. ಮಹಾಂತ ಕಟ್ಟಿಮನಿ, ಪ್ರೊ. ಶಶಿಧರಗೌಡ ಮುಂತಾದವರಿದ್ದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024–25ನೇ ಸಾಲಿನಲ್ಲಿ ಸಮನ್ವಯ ಶಿಕ್ಷಣ ಮಧ್ಯವರ್ತನ ಚಟುವಟಿಕೆಯನ್ನು ಅನುಷ್ಠಾನಗೊಳಿಸಲು ನೇರ ಗುತ್ತಿಗೆ ಆಧಾರದ ಮೇಲೆ ಬಿ.ಆರ್. ಇ.ಆರ್.ಟಿ ಹುದ್ದೆಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಅರ್ಜಿ ಅಹ್ವಾನಿಸಲಾಗಿದೆ. ಸಮನ್ವಯ ಶಿಕ್ಷಣ ಸಂಪನ್ಮೂಲ ಶಿಕ್ಷಕರಾಗಿ ಕಾರ್ಯನಿರ್ವಹಿಸಲು ಪ್ರತಿ ಬ್ಲಾಕ್ ಹಂತದ ಸಂಪನ್ಮೂಲ ಕೇಂದ್ರಗಳಿಗೆ ವಿಶೇಷ ಶಿಕ್ಷಣದಲ್ಲಿ ಡಿ.ಇಡಿ ಮತ್ತು ಆರ್.ಸಿ.ಐ. ಪ್ರಕಾರ ಪ್ರಾಥಮಿಕ ಹಂತಕ್ಕೆ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಮತ್ತು ಪದವಿಯೊಂದಿಗೆ ವಿಶೇಷ ಬಿ.ಇಡಿ. ಮತ್ತು ಆರ್.ಸಿ.ಐ ವಿದ್ಯಾರ್ಹತೆ ಹೊಂದಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಕರಿಂದ ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳು ಜೂನ್ 12 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ ಸಾರ್ವಜನಿಕ ಶಿಕ್ಷಣ ಮತ್ತು ಸಮಗ್ರ ಶಿಕ್ಷಣ ಇಲಾಖೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka